ಬಳ್ಳಾರಿ । ವಿಜಯನಗರ । ಕೊಪ್ಪಳ । ಬೆಂಗಳೂರು । ದಾವಣಗೆರೆ । ಹುಬ್ಬಳ್ಳಿ   ದಾವಣಗೆರೆ । ಹಾವೇರಿ । ಗದಗ । ರಾಯಚೂರು । ವಿಜಯನಗರ । ತುಮಕೂರು

# ಅನಂತ ಜನಶಕ್ತಿ

ANANTA JANASHAKTHI — KANNADA DAILY NEWS PAPER

ಸಂಪಾದಕ: ಎಸ್.ವೆಂಕಟೇಸುಲು | ಬಳ್ಳಾರಿ ಜಿಲ್ಲೆಯಿಂದ ಪ್ರಕಟಿತ ಕನ್ನಡ ದೈನಿಕ | EDITOR : S VENKATESULU

ಸಂಪುಟ : 01   ಸಂಚಿಕೆ : 69   ರಿ.ನಂ : ಕೆಎನ್‌ಎಎನ್ / 26 / ಎ5487   ಬಳ್ಳಾರಿ   ಬುಧವಾರ   ದಿನಾಂಕ : 23-09-2026   ಪುಟ : 04   ಬೆಲೆ : 2-00

## ಇಂದಿನ ಪ್ರಮುಖ


- ಜಿಲ್ಲಾ ಮಟ್ಟದ 'ದಸರಾ ಕ್ರೀಡಾಕೂಟ: ಕ್ರೀಡಾ ಮನೋಭಾವಕ್ಕೆ ಕರೆ 03
- ನಾಟಕಗಳು ಮನುಷ್ಯನನ್ನು ಹೊಸ ಆಲೋಚನೆಗೆ ಪ್ರೇರಣೆ ನೀಡುತ್ತವೆ : ಯೋಗಾನಂದ ರೆಡ್ಡಿ 03
- ಹಾಸ್ಟೆಲ್ ಕಾರ್ಮಿಕರ ಬಾಕಿ ವೇತನ ಬಿಡುಗಡೆಗೆ ಎಐಟಿಯುಸಿ ಪ್ರತಿಭಟನೆ 04
- ಪೊಲೀಸ್ ಅಧಿಕಾರಿಗೆ ನಿಂದನೆ ಪ್ರತಾಪ್ ಸಿಂಹ ವಿರುದ್ಧ ಅಟ್ರಾಸಿಟಿ ಕೇಸ್ ದಾಖಲು 04
- ಡಿಜೆ ಸದ್ದಿಗೆ ಹಾರಿಹೋದ ಜೀವ ನಗುನಗುತ್ತಲೇ ಇದ್ದ 2ನೇ ತರಗತಿ ಬಾಲಕಿ ಕುಸಿದು ಬಿದ್ದು ಸಾವು 04


# ಕಸ್ತೂರಿರಂಗನ್ ವರದಿ ತಿರಸ್ಕಾರ

ಬೆಂಗಳೂರು: ಕಸ್ತೂರಿರಂಗನ್ ವರದಿಯ ಅನ್ವಯ ಕೇಂದ್ರ ಸರ್ಕಾರ ಹೊರಡಿಸಿರುವ ಪರಿಸರ ಸೂಕ್ಷ್ಮ ಪ್ರದೇಶಗಳ ಕುರಿತಾದ ಏಳನೇ ಕರಡು ಅಧಿಸೂಚನೆಯನ್ನು ಅದರ ಪ್ರಸ್ತುತ ರೂಪದಲ್ಲಿ ಸ್ವೀಕರಿಸದಿರಲು ಕರ್ನಾಟಕ ವಿಧಾನಸಭೆಯು ಮಂಗಳವಾರ ಸರ್ವಾನುಮತದಿಂದ ನಿರ್ಣಯ ಕೈಗೊಂಡಿತು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಂಡಿಸಿದ ಈ ನಿರ್ಣಯದಲ್ಲಿ, ಪಶ್ಚಿಮ ಘಟ್ಟಗಳು ಕರ್ನಾಟಕದ ಅತ್ಯಂತ ಪ್ರಮುಖ ನೈಸರ್ಗಿಕ ಸಂಪತ್ತುಗಳಲ್ಲಿ ಒಂದಾಗಿದ್ದು, ಜೀವವೈವಿಧ್ಯ ಮತ್ತು ಪರಿಸರ ಸಮತೋಲನಕ್ಕೆ



ಅತ್ಯಗತ್ಯವಾಗಿವೆ ಎಂದು ತಿಳಿಸಲಾಗಿದೆ.

ಈ ಏಳನೇ ಕರಡು ಅಧಿಸೂಚನೆಯು ಕರ್ನಾಟಕದ ಹತ್ತು ಜಿಲ್ಲೆಗಳ 1,449 ಹಳ್ಳಿಗಳಲ್ಲಿ ವ್ಯಾಪಿಸಿರುವ ಸುಮಾರು 20,668 ಚದರ ಕಿಲೋಮೀಟರ್ ಪ್ರದೇಶವನ್ನು ಒಳಗೊಂಡಿದೆ.

ಅರಣ್ಯ ಪ್ರದೇಶಗಳ ಜೊತೆಗೆ ಕೃಷಿ ಭೂಮಿ, ತೋಟಗಳು, ಮನೆಗಳು ಮತ್ತು ಸಾರ್ವಜನಿಕ ಸೌಕರ್ಯಗಳನ್ನೂ ಈ ಅಧಿಸೂಚನೆಯಲ್ಲಿ ಸೇರಿಸಿರುವುದರಿಂದ ಸ್ಥಳೀಯ ಜನರಲ್ಲಿ ತೀವ್ರ ಆತಂಕ ಉಂಟಾಗಿದೆ ಎಂದು ವಿಧಾನಸಭೆ

2ನೇ ಪುಟಕ್ಕೆ...

# ಬರ ತಾಲೂಕು 177ಕ್ಕೆ ಏರಿಕೆ



ಬೆಂಗಳೂರು: ರಾಜ್ಯದಲ್ಲಿನ ಬರಪೀಡಿತ ತಾಲ್ಲೂಕುಗಳ ಸಂಖ್ಯೆ 177ಕ್ಕೆ ಏರಿಕೆಯಾಗಿದೆ.

ಮೊದಲ ಹಂತದಲ್ಲಿ 101, ಎರಡನೇ ಹಂತದಲ್ಲಿ 23 ತಾಲ್ಲೂಕುಗಳನ್ನು ಬರಬಾಧಿತ ಎಂದು ಸರ್ಕಾರ ಘೋಷಣೆ ಮಾಡಿತ್ತು. ಮೂರನೇ ಹಂತದಲ್ಲಿ ಮತ್ತೆ 53 ತಾಲ್ಲೂಕುಗಳನ್ನು ಈ ಯಾದಿಗೆ ಸೇರ್ಪಡೆ ಮಾಡಲಾಗಿದೆ.

ಬರ ಪರಿಸ್ಥಿತಿಯ ಕುರಿತು ವಿಧಾನ ಪರಿಷತ್ತಿನಲ್ಲಿ ಮಂಗಳವಾರ ಹೇಳಿಕೆ ನೀಡಿದ, ಕಂದಾಯ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಜಿ.ಪರಮೇಶ್ವರ, 'ಹೊಸದಾಗಿ ಘೋಷಿಸಲಾದ ತಾಲ್ಲೂಕುಗಳ ಪೈಕಿ 51 ತೀವ್ರ ಹಾಗೂ 2 ಸಾಧಾರಣ ಬರಪೀಡಿತವಾಗಿವೆ' ಎಂದರು.

'ಇದರ ಜೊತೆಗೆ ಮಳೆ ಪ್ರಮಾಣ, ಮಣ್ಣಿನ ತೇವಾಂಶ, ಬೆಳೆ ಸ್ಥಿತಿ ಸೇರಿದಂತೆ ವಿವಿಧ ವೈಜ್ಞಾನಿಕ ಮಾನದಂಡಗಳ ಆಧಾರದ ಮೇಲೆ ನಾಲ್ಕನೇ ಹಂತದಲ್ಲಿ ಏಳು ಜಿಲ್ಲೆಗಳ

2ನೇ ಪುಟಕ್ಕೆ...

# ವಂದೇ ಮಾತರಂ ವಿವಾದ:

## ಉತ್ತರ ನೀಡಲು ಕೇಂದ್ರಕ್ಕೆ ಸುಪ್ರೀಂ ಸೂಚನೆ



ನವದೆಹಲಿ: ಸಾರ್ವಜನಿಕ ಕಾರ್ಯಕ್ರಮಗಳಲ್ಲಿ ರಾಷ್ಟ್ರಗೀತೆ 'ವಂದೇ ಮಾತರಂ'ನ ಎಲ್ಲಾ ಆರು ಚರಣಗಳನ್ನು ಹಾಡುವುದನ್ನು ಕಡ್ಡಾಯಗೊಳಿಸಿರುವ ಕೇಂದ್ರದ ನಿರ್ದೇಶನ ಹಾಗೂ ಅದಕ್ಕೆ ಸಂಬಂಧಿಸಿದ ದಂಡಾತ್ಮಕ ಕ್ರಮಗಳನ್ನು ಪ್ರಶ್ನಿಸಿ ಸಲ್ಲಿಸಿರುವ ಅರ್ಜಿಯ ವಿಚಾರಣೆಯನ್ನು ಸುಪ್ರೀಂ ಕೋರ್ಟ್ ನಡೆಸಿತು. ಅರ್ಜಿಗೆ ಎರಡು ವಾರಗಳಲ್ಲಿ ಪ್ರತಿಕ್ರಿಯೆ ಸಲ್ಲಿಸುವಂತೆ ಕೇಂದ್ರ ಸರ್ಕಾರಕ್ಕೆ ನ್ಯಾಯಾಲಯ ಸೂಚಿಸಿದೆ. ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ನೇತೃತ್ವದ, ನ್ಯಾಯಮೂರ್ತಿಗಳಾದ ಜಾಯ್ಮಲ್ಯ ಬಾಗ್ಚಿ ಮತ್ತು ವಿ.ಮೊಹನಾ ಅವರನ್ನೊಳಗೊಂಡ ಪೀಠ ಅರ್ಜಿಯನ್ನು ವಿಚಾರಣೆ ನಡೆಸಿತು. ಕರ್ನಾಟಕ ಮೂಲದ ಖ್ಯಾತ ಕರ್ನಾಟಕ ಸಂಗೀತ ಗಾಯಕ ಟಿ.ಎಂ.ಕೃಷ್ಣ ಅವರು ಅರ್ಜಿ ಸಲ್ಲಿಸಿದ್ದು, ವಂದೇ ಮಾತರಂನ ಎಲ್ಲಾ ಆರು ಚರಣಗಳನ್ನು ಹಾಡುವಂತೆ ಮಾಡಿರುವ ನಿಯಮ ಹಾಗೂ ಹಾಡದಿದ್ದರೆ ದಂಡಾತ್ಮಕ ಕ್ರಮ ಕೈಗೊಳ್ಳುವ ಅವಕಾಶವನ್ನು ಪ್ರಶ್ನಿಸಿದ್ದಾರೆ.

# ರಾಷ್ಟ್ರಪತಿಗಳಿಂದ ಅನಂತ್ ನಾಗ್‌ಗೆ ಪ್ರತಿಷ್ಠಿತ

## ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ ಪ್ರದಾನ



ಏಕ್ತಾ ನಗರ: ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಮಂಗಳವಾರ ಕನ್ನಡದ ಖ್ಯಾತ ನಟ ಅನಂತ್ ನಾಗ್ ಅವರಿಗೆ ಭಾರತೀಯ ಚಲನಚಿತ್ರ ರಂಗದ ಅತ್ಯುನ್ನತ ಗೌರವವಾದ 'ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ'ಯನ್ನು ನೀಡಿ ಗೌರವಿಸಿದರು. ವಿವಿಧ ವಿಭಾಗಗಳಲ್ಲಿ ಒಟ್ಟು 92 ಮಂದಿ ಪ್ರಶಸ್ತಿಗಳನ್ನು ಸ್ವೀಕರಿಸಿದ್ದಾರೆ.

ಇಂದು ಗುಜರಾತ್‌ನ ನರ್ಮದಾ ಜಿಲ್ಲೆಯ ಏಕ್ತಾ ನಗರದಲ್ಲಿ ನಡೆದ 72ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ರಾಷ್ಟ್ರಪತಿಗಳು, ಅನಂತ್ ನಾಗ್ ಅವರಿಗೆ ಪ್ರತಿಷ್ಠಿತ ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ ಪ್ರದಾನ ಮಾಡಿದರು. ಐದು ದಶಕಗಳಿಗೂ ಹೆಚ್ಚು ಕಾಲ ಭಾರತೀಯ ಚಿತ್ರರಂಗಕ್ಕೆ ನೀಡಿದ ಕೊಡುಗೆಯನ್ನು ಗುರುತಿಸಿ ಅನಂತ್ ನಾಗ್ ಅವರಿಗೆ ಈ ಪ್ರಶಸ್ತಿ ನೀಡಲಾಗಿದೆ. ಏಕ್ತಾ ನಗರದಲ್ಲಿರುವ 'ಸ್ಟ್ಯಾಚ್ಯೂ ಆಫ್ ಯೂನಿಟಿ'ಯಲ್ಲಿ ನಡೆಯುತ್ತಿರುವ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು,

2ನೇ ಪುಟಕ್ಕೆ...

# ರಾಜ್ಯದ ಸಾಲ ಹೆಚ್ಚಳ:

## ಹೊಸ ಯೋಜನೆಗಳಿಗೆ ಆರ್ಥಿಕ ಬ್ರೇಕ್



ಬೆಂಗಳೂರು: ಗ್ಯಾರಂಟಿ ಯೋಜನೆಗಳ ಹೊರೆಯ ನಡುವೆಯೇ ಸರಣಿ ಹೊಸ ಯೋಜನೆಗಳನ್ನು ಪ್ರಕಟಿಸುತ್ತಿರುವ ರಾಜ್ಯ ಸರ್ಕಾರಕ್ಕೆ ಆರ್ಥಿಕ ಇಲಾಖೆ ತೀವ್ರ ಆಘಾತ ನೀಡಿದೆ. ರಾಜ್ಯದಲ್ಲಿ ಸಾಲದ ಪ್ರಮಾಣ ಹೆಚ್ಚಾಗಿದ್ದು, ಹೊಸ ಘೋಷಣೆಗಳನ್ನು ಮಾಡಲು ಸಾಧ್ಯವೇ ಇಲ್ಲ ಎಂದು ಆರ್ಥಿಕ ಇಲಾಖೆಯು ಮುಖ್ಯಮಂತ್ರಿ ಅವರಿಗೆ ಸೆ.17 ರಂದು ಸ್ಪಷ್ಟ ಎಚ್ಚರಿಕೆಯ ಟಿಪ್ಪಣಿ ರವಾನಿಸಿದೆ.

ಈಗಾಗಲೇ ಘೋಷಿಸಲಾಗಿರುವ ಯೋಜನೆಗಳ ಅನುಷ್ಠಾನಕ್ಕೆ ಬರೋಬ್ಬರಿ 27,000 ಕೋಟಿ ರೂ. ಕೊರತೆ ಎದುರಾಗಿದೆ ಎಂದು ಟಿಪ್ಪಣಿಯಲ್ಲಿ ಉಲ್ಲೇಖಿಸಲಾಗಿದೆ.

# ರಾಜ್ಯದಲ್ಲಿ ಬೇಡಿಕೆ ಏರಿಕೆ:

## ವಿದ್ಯುತ್ ಕಡಿತದ ಆತಂಕ



ಬೆಂಗಳೂರು: ಪ್ರತಿದಿನ ವಿದ್ಯುತ್ ಬೇಡಿಕೆ 2,000–3,000 ಮೆಗಾವ್ಯಾಟ್‌ನಷ್ಟು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಕರ್ನಾಟಕದಲ್ಲಿ ವಿದ್ಯುತ್ ಕಡಿತದ ಸಮಸ್ಯೆ ಎದುರಾಗಿದೆ. ವಿದ್ಯುತ್ ಸರಬರಾಜು ಕಂಪನಿಗಳ ಸಿಬ್ಬಂದಿ, ರೈತರು ಹಾಗೂ ಗ್ರಾಹಕರು ವಿದ್ಯುತ್ ಕಡಿತದ ಬಗ್ಗೆ ಗಮನ ಸೆಳೆಯುತ್ತಿದ್ದರೆ, ಇಂಧನ ಇಲಾಖೆಯ ಅಧಿಕಾರಿಗಳು ನಿರ್ವಹಣಾ ಕಾರ್ಯಗಳಿಗೆ ವಿದ್ಯುತ್ ವ್ಯತ್ಯಯ ಮಾಡಲಾಗುತ್ತಿದೆ.

# ನಂದಿನಿ ಹಾಲಿನ ದರ 8 ರೂ. ಹೆಚ್ಚಳ ಮಾಡಿ–ಡಿಕೆಶಿಗೆ ಒಕ್ಕೂಟಗಳ ಮನವಿ



ಬೆಂಗಳೂರು: ನಂದಿನಿ ಹಾಲಿನ ಖರೀದಿ ಮತ್ತು ಮಾರಾಟ ದರವನ್ನು ಪ್ರತಿ ಲೀಟರ್ ಗೆ ರೂ.8ರಿಂದ ರೂ.10ರಷ್ಟು ಹೆಚ್ಚಿಸಲು ಕರ್ನಾಟಕ ರಾಜ್ಯದ ಸಹಕಾರ ಹಾಲು ಉತ್ಪಾದಕರ ಒಕ್ಕೂಟಗಳ ನಿಯೋಗ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರಿಗೆ ಮನವಿ ಸಲ್ಲಿಸಿದೆ.

ವಿಧಾನಸೌಧದಲ್ಲಿ ಶಿವಕುಮಾರ್ ಅವರನ್ನು ಹಾಲು ಒಕ್ಕೂಟಗಳ ನಿಯೋಗವು ಮಂಗಳವಾರ ಭೇಟಿ ಮಾಡಿ ಸಮಾಲೋಚನೆ ನಡೆಸಿತು.

ಈ ಸಂದರ್ಭದಲ್ಲಿ ಮಾತನಾಡಿದ ಮುಖ್ಯಮಂತ್ರಿ ಅವರು, "ಕಳೆದ 10 ವರ್ಷಗಳಲ್ಲಿ ಪಶು ಆಹಾರ ದರದಲ್ಲಿನ ಹೆಚ್ಚಳ, ಪ್ರತಿ ಲೀಟರ್ ಹಾಲು ಉತ್ಪಾದನೆಗೆ ತಗಲುವ ವೆಚ್ಚ, ಜಿಲ್ಲೆಗಳಲ್ಲಿ ಎಷ್ಟು ಪ್ರಮಾಣದ ಹಾಲು, ಒಕ್ಕೂಟ ಹೊರತುಪಡಿಸಿ ಬೇರೆ ಕಡೆ ಮಾರಾಟವಾಗುತ್ತಿದೆ? ಒಕ್ಕೂಟ ಎಷ್ಟು ಖರೀದಿಸುತ್ತಿದೆ? ನೆರೆಯ ರಾಜ್ಯಗಳಲ್ಲಿ ಹಾಲು ಖರೀದಿ ಮತ್ತು ಮಾರಾಟ ದರದ ವಿವರ ಸೇರಿದಂತೆ ಸಮಗ್ರ ಮಾಹಿತಿಯನ್ನು ಸಲ್ಲಿಸಿ" ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಿಯೋಗದ ಪರವಾಗಿ ಮಾತನಾಡಿದ ಬಮುಲ್ ಅಧ್ಯಕ್ಷ ಡಿ.ಕೆ.ಸುರೇಶ್, "ಹೈನುಗಾರಿಕೆಗೆ ಅಗತ್ಯವಿರುವ ಪಶು ಆಹಾರ, ಮೇವು,

2ನೇ ಪುಟಕ್ಕೆ...

# ಡಿ.13ಕ್ಕೆ 'ವೃಕ್ಷಥಾನ್ ಹೆರಿಟೇಜ್ ರನ್'

## 30 ಸಾವಿರ ಓಟಗಾರರ ನೋಂದಣಿ ಗುರಿ: ಸಿಇಒ ರಿಷಿ ಆನಂದ



ವಿಜಯಪುರ : ಪರಿಸರ ಸಂರಕ್ಷಣೆ, ಹಸರೀಕರಣ ಹಾಗೂ ಜಿಲ್ಲೆಯ ಪಾರಂಪರಿಕ ಸ್ಮಾರಕಗಳ ಸಂರಕ್ಷಣೆಯ ಮಹತ್ವವನ್ನು ಜನರಿಗೆ ಸಾರುವ ಉದ್ದೇಶದಿಂದ ಡಿ.13ರಂದು 'ವೃಕ್ಷಥಾನ್ ಹೆರಿಟೇಜ್ ರನ್–2026' ಆಯೋಜಿಸಲಾಗಿದ್ದು, ಈ ಬಾರಿ 30 ಸಾವಿರ ಓಟಗಾರರನ್ನು ನೋಂದಾಯಿಸುವ ಗುರಿ ಹೊಂದಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ್ ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ ನಡೆದ ವೃಕ್ಷಥಾನ್ ಹೆರಿಟೇಜ್ ರನ್–2026ರ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲಾ ಹಾಗೂ ತಾಲೂಕು ಮಟ್ಟದ ಎಲ್ಲ ಇಲಾಖೆಗಳು ತಮ್ಮ ಅಧಿಕಾರಿ–ಸಿಬ್ಬಂದಿಯೊಂದಿಗೆ ನೋಂದಣಿ ಮಾಡಿಕೊಂಡು ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಎಲ್ಲ ಇಲಾಖೆಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸುವ ಮೂಲಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಹೇಳಿದರು.

ಕಳೆದ ಬಾರಿ ಸುಮಾರು 23 ಸಾವಿರ ಓಟಗಾರರು ಭಾಗವಹಿಸಿದ್ದರು.

# ಲೋಡ್‌ಶೆಡ್ಡಿಂಗ್ ವಿರುದ್ಧ ಸಿರಗೇರಿಯಲ್ಲಿ

## ಜೆಸ್ಕಾಂ ಕಚೇರಿ ಮುತ್ತಿಗೆ ಹಾಕಿ ರೈತರ ಆಕ್ರೋಶ



ಬಳ್ಳಾರಿ: ಕೃಷಿ ಪಂಪ್‌ಸೆಟ್‌ಗಳಿಗೆ ನಿರಂತರ 12 ಗಂಟೆ ತ್ರಿಫೇಸ್ ವಿದ್ಯುತ್ ಪೂರೈಕೆಗೆ ಒತ್ತಾಯಿಸಿ, ತಾಲೂಕಿನ ಸಿರಗೇರಿ ಪಟ್ಟಣದ ಜೆಸ್ಕಾಂ ವಿದ್ಯುತ್ ವಿತರಣಾ ಕೇಂದ್ರದ ಮುಂದೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ನೇತೃತ್ವದಲ್ಲಿ ರೈತರು ಮಂಗಳವಾರ ಬೃಹತ್ ಪ್ರತಿಭಟನೆ ನಡೆಸಿದರು. ಕಚೇರಿಯ ಮುಖ್ಯದ್ವಾರದ ಮುಂದೆ ಜಮಾಯಿಸಿದ ಅನ್ನದಾತರು, ಜೆಸ್ಕಾಂ ಅಧಿಕಾರಿಗಳ ಬೇಜವಾಬ್ದಾರಿತನ ಹಾಗೂ ರಾಜ್ಯ ಸರ್ಕಾರದ ರೈತವಿರೋಧಿ ಧೋರಣೆಯ ವಿರುದ್ಧ ಘೋಷಣೆ ಕೂಗಿ ಆಕ್ರೋಶ ಹೊರಹಾಕಿದರು.

ಮಳೆಯಿಲ್ಲದೆ ಕೆರೆ–ಕಟ್ಟೆಗಳು ಬತ್ತಿ ಹೋಗಿದ್ದು, ಜಮೀನಿನಲ್ಲಿರುವ ಬೆಳೆಗಳನ್ನು ಉಳಿಸಿಕೊಳ್ಳಲು ಪಂಪ್‌ಸೆಟ್‌ಗಳೇ ಏಕೈಕ ಆಸರೆಯಾಗಿವೆ. ಆದರೆ ದಿನದಲ್ಲಿ ಕನಿಷ್ಠ ಪ್ರಮಾಣದಲ್ಲೂ ವಿದ್ಯುತ್ ನೀಡದೆ ಕಣ್ಣಾಮುಚ್ಚಾಲೆ ಆಡಲಾಗುತ್ತಿದೆ. ವಿದ್ಯುತ್ ಬಗ್ಗೆ ಕೇಳಿದರೆ ಅಧಿಕಾರಿಗಳು ಕೇವಲ 'ಲೋಡ್‌ಶೆಡ್ಡಿಂಗ್' ಎಂಬ ಸಬೂಬು ಹೇಳಿ ಜಾರಿಕೊಳ್ಳುತ್ತಿದ್ದಾರೆ ಎಂದು ರೈತರು ಕಿಡಿಕಾರಿದರು.

ಒಂದನೇ ಪುಟದಿಂದ...

# ಕಸ್ತೂರಿರಂಗನ್ ವರದಿ ತಿರಸ್ಕಾರ

ಅಭಿಪ್ರಾಯಪಟ್ಟಿದೆ. ಜಂಟಿ ಭೌತಿಕ ಸಮೀಕ್ಷೆ ನಡೆಸದೆ ಹಾಗೂ ಸರ್ವೆ ನಂಬರ್‌ಗಳ ಆಧಾರದ ಮೇಲೆ ಪ್ರದೇಶಗಳನ್ನು ಗುರುತಿಸದೆ, ಕೇವಲ ಉಪಗ್ರಹ ದತ್ತಾಂಶದ ಆಧಾರದ ಮೇಲೆ ಗಡಿಗಳನ್ನು ನಿರ್ಧರಿಸಿರುವುದಕ್ಕೂ ಸಭೆಯು ಆಕ್ಷೇಪ ವ್ಯಕ್ತಪಡಿಸಿದೆ.

ಬಗರ್ ಹುಕುಂ ಭೂಮಿ, ಅರಣ್ಯ ಹಕ್ಕು ಕಾಯ್ದೆಯಡಿ ಸಲ್ಲಿಸಲಾದ ಹಕ್ಕು ಕೋರಿಕೆಗಳು, ಡೀಮ್ಡ್ ಅರಣ್ಯ , ಭೂ ಮಂಜೂರಾತಿ, ಮೇಲ್ಮನವಿಗಳು ಮತ್ತು ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳಿಗೆ ಸಂಬಂಧಿಸಿದ ವಿಷಯಗಳನ್ನು ಸಮರ್ಪಕವಾಗಿ ಪರಿಗಣಿಸಿಲ್ಲ ಎಂದು ನಿರ್ಣಯದಲ್ಲಿ ಪ್ರಮುಖವಾಗಿ ಪ್ರಸ್ತಾಪಿಸಲಾಗಿದೆ. ಅಲ್ಲದೆ, ಒಂದು ಹಳ್ಳಿಯ ಒಟ್ಟು ವಿಸ್ತೀರ್ಣದ ಐದನೇ ಒಂದು ಭಾಗದಷ್ಟು ಪ್ರದೇಶವು ಅರಣ್ಯ ವ್ಯಾಪ್ತಿಗೆ ಬರುತ್ತದೆ ಎಂಬ ಕಾರಣಕ್ಕಾಗಿಯೇ ಇಡೀ ಹಳ್ಳಿಯನ್ನೇ ಇಎಸ್‌ಎ ಎಂದು ಘೋಷಿಸುವ ಕ್ರಮವನ್ನು ಪ್ರಶ್ನಿಸಿರುವ ಸಭೆಯು, ಇದನ್ನು ಅವೈಜ್ಞಾನಿಕ ವಿಧಾನವೆಂದು ಬಣ್ಣಿಸಿದೆ.

ಹಲವಾರು ಬದಲಾವಣೆಗಳನ್ನು ಮಾಡುವಂತೆ ವಿಧಾನಸಭೆಯು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದೆ. ಈಗಾಗಲೇ ಮಂಜೂರಾದ ಭೂಮಿ, ಕೃಷಿ ಮತ್ತು ತೋಟದ ಪ್ರದೇಶಗಳು, ಮಾನವ ವಸತಿ ಪ್ರದೇಶಗಳು ಹಾಗೂ ಸಾರ್ವಜನಿಕ ಬಳಕೆ-ಯ ಪ್ರದೇಶಗಳನ್ನು ಹೊರತುಪಡಿಸಿ, ಕೇವಲ ಅಧಿಸೂಚಿತ ಅರಣ್ಯ ಪ್ರದೇಶಗಳು ಮತ್ತು ಇತರ ಅರಣ್ಯ ಭೂಮಿಯನ್ನು ಮಾತ್ರ ಇಎಸ್‌ಎ ವ್ಯಾಪ್ತಿಗೆ ಸೇರಿಸುವಂತೆ ಅದು ಕೋರಿದೆ.

ಗಡಿಗಳನ್ನು ಅಂತಿಮಗೊಳಿಸುವಾಗ 'ಬಗರ್ ಹುಕುಂ' (ಸಾಗುವಳಿ ಹಕ್ಕು), ಅರಣ್ಯ ಹಕ್ಕುಗಳು, 'ಡೀಮ್ಡ್ ಫಾರೆಸ್ಟ್' (ಅರಣ್ಯವೆಂದು ಪರಿಗಣಿಸಲ್ಪಟ್ಟ ಪ್ರದೇಶಗಳು), ಭೂ ಮಂಜೂರಾತಿ, ಮೇಲ್ಮನವಿಗಳು ಮತ್ತು ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಪರಿಗಣನೆಗೆ ತೆಗೆದುಕೊಳ್ಳಬೇಕು ಎಂದು ಅದು ಒತ್ತಾಯಿಸಿತು. ತಜ್ಞರ ಸಮಿತಿಯೊಂದು ಸರ್ವೆ ನಂಬರ್ ಆಧಾರದ ಮೇಲೆ ಅರಣ್ಯದ ಗಡಿಗಳು, ವಸತಿ ಪ್ರದೇಶಗಳು, ಕೃಷಿ ಭೂಮಿಗಳು ಮತ್ತು ಪರಿಸರ ಸೂಕ್ಷ್ಮ ಪ್ರದೇಶಗಳನ್ನು ಖುದ್ದು ಪರಿಶೀಲಿಸಿ ಗುರುತಿಸಬೇಕು ಎಂದು ನಿರ್ಣಯದಲ್ಲಿ ತಿಳಿಸಲಾಗಿದೆ.

ಪರಿಸರ ಸೂಕ್ಷ್ಮ ಪ್ರದೇಶ) ನಿರ್ಬಂಧಗಳಿಂದಾಗಿ ಸಂಭಾವ್ಯವಾಗಿ ಬಾಧಿತರಾಗುವ ರೈತರು ಮತ್ತು ಕಾರ್ಮಿಕರಿಗೆ ಪರ್ಯಾಯ ಜೀವನೋಪಾಯದ ಅವಕಾಶಗಳು ಹಾಗೂ ಆರ್ಥಿಕ ನೆರವು ಒದಗಿಸಲು ಸೂಕ್ತ ಮಾರ್ಗಸೂಚಿಗಳನ್ನು ರೂಪಿಸುವಂತೆಯೂ ರಾಜ್ಯ ಸರ್ಕಾರ ಕೋರಿತು. ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ಉನ್ನತ ಮಟ್ಟದ ಸಮಿತಿಯೊಂದನ್ನು ರಚಿಸುವುದಾಗಿ ನಿರ್ಣಯವು ಮತ್ತಷ್ಟು ತಿಳಿಸಿತು. ಈ ಸಮಿತಿಯಲ್ಲಿ ಕಂದಾಯ ಮತ್ತು ಅರಣ್ಯ ಇಲಾಖೆಯ ಅಧಿಕಾರಿಗಳು, ರೈತರು ಹಾಗೂ ಕೈಗಾರಿಕಾ ವಲಯದ ಪ್ರತಿನಿಧಿಗಳು ಮತ್ತು ಅರಣ್ಯ ಹಾಗೂ ಪರಿಸರ ವಿಷಯಗಳಲ್ಲಿ ಪರಿಣತಿ ಹೊಂದಿರುವ ಶೈಕ್ಷಣಿಕ ಸಂಸ್ಥೆಗಳ ತಜ್ಞರು ಹಾಗೂ ವಿಜ್ಞಾನಿಗಳು ಇರಲಿದ್ದಾರೆ. ಈ ಸಮಿತಿಯು ಕಸ್ತೂರಿರಂಗನ್ ವರದಿಯ ನ್ಯೂನತೆಗಳನ್ನು ಪರಿಶೀಲಿಸಿ ಸೂಕ್ತ ಬದಲಾವಣೆಗಳನ್ನು ಸೂಚಿಸಲಿದೆ.

ಕಸ್ತೂರಿರಂಗನ್ ವರದಿ ವಿವಾದ: ಕೇರಳ ಮಾದರಿ ಅನುಸರಿಸಿ ಭೌತಿಕ ಸಮೀಕ್ಷೆ ನಡೆಸಿ: ಸರ್ಕಾರಕ್ಕೆ ಆರ್. ಅಶೋಕ್ ಒತ್ತಾಯ

ರಾಜ್ಯ ಸರ್ಕಾರವು ಬಾಧಿತ ಪ್ರದೇಶಗಳಲ್ಲಿ ಸರ್ವೆ ನಂಬರ್ ಆಧಾರದ ಮೇಲೆ ಖುದ್ದು ಸಮೀಕ್ಷೆ ಮತ್ತು ಗಡಿ ಗುರುತಿಸುವ ಕಾರ್ಯವನ್ನು ಕೈಗೊಳ್ಳಲಿದೆ. ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಒಂದು ವರ್ಷದ ಕಾಲಾವಕಾಶ ನೀಡುವಂತೆ ಹಾಗೂ ಈ ಅವಧಿಯಲ್ಲಿ ರಾಜ್ಯಕ್ಕೆ ಸಂಬಂಧಿಸಿದ ಅಧಿಸೂಚನೆಯನ್ನು ಅಂತಿಮಗೊಳಿಸದಂತೆ ಕರ್ನಾಟಕವು ಕೇಂದ್ರ ಸರ್ಕಾರವನ್ನು ಕೋರಲಿದೆ. ಸಮಿತಿಯು ತನ್ನ ವರದಿಯನ್ನು ಸಲ್ಲಿಸಿದ ನಂತರ, ಪರಿಸರ ಸೂಕ್ಷ್ಮ ಪ್ರದೇಶ (ಇಖಂ) ಅಧಿಸೂಚನೆಯ ಕುರಿತು ಅಂತಿಮ ನಿರ್ಧಾರ ಕೈಗೊಳ್ಳುವ ಮುನ್ನ ಕೇಂದ್ರ ಸರ್ಕಾರವು ರಾಜ್ಯ ಸರ್ಕಾರದೊಂದಿಗೆ ವಿಸ್ತೃತ ಚರ್ಚೆ ನಡೆಸಬೇಕು ಎಂದು ನಿರ್ಣಯದಲ್ಲಿ ಪ್ರತಿಪಾದಿಸಲಾಗಿದೆ.

ರಾಜ್ಯ ಮಟ್ಟದ ಸಮಿತಿಗೆ ನೆರವಾಗಲು ಮತ್ತು ಈ ಪ್ರಕ್ರಿಯೆಯಲ್ಲಿ ಸ್ಥಳೀಯರ ಭಾಗವಹಿಸುವಿಕೆಯನ್ನು ಸುಗಮಗೊಳಿಸಲು, ಚುನಾಯಿತ ಪ್ರತಿನಿಧಿಗಳನ್ನು ಒಳಗೊಂಡ ಗ್ರಾಮ ಪಂಚಾಯತ್ ಮಟ್ಟದ ಸಮಿತಿಗಳನ್ನು ರಚಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ. ಕರ್ನಾಟಕ ವಿಧಾನಮಂಡಲದ ಮೂರು ದಿನಗಳ ವಿಶೇಷ ಅಧಿವೇಶನದಲ್ಲಿ ಕಸ್ತೂರಿರಂಗನ್ ವರದಿ ಹಾಗೂ ಪಶ್ಚಿಮ ಘಟ್ಟಗಳ ಪ್ರದೇಶದಲ್ಲಿ ವಾಸಿಸುವ ಜನರ ಆತಂಕಗಳ ಕುರಿತು ಚರ್ಚೆ ನಡೆದ ನಂತರ ಈ ನಿರ್ಣಯವನ್ನು ಸರ್ವಾನುಮತದಿಂದ ಅಂಗೀಕರಿಸಲಾಯಿತು.

# ರಾಷ್ಟ್ರಪತಿಗಳಿಂದ ಅನಂತ್ ನಾಗ್‌ಗೆ ಪ್ರತಿಷ್ಠಿತ ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ ಪ್ರದಾನ

2024ನೇ ಸಾಲಿನ ಸಿನಿಮಾ ಸಾಧಕರಿಗೆ ಪ್ರಶಸ್ತಿಗಳನ್ನು ಪ್ರದಾನ ಮಾಡಿದರು.

ದೇಶದ ಅತ್ಯಂತ ಜನಪ್ರಿಯ ನಟರಲ್ಲಿ ಒಬ್ಬರಾದ ಅನಂತ್ ನಾಗ್, ಐದು ದಶಕಗಳ ಸುದೀರ್ಘ ಹಾಗೂ ಗಮನಾರ್ಹ ವೃತ್ತಿಜೀವನದಲ್ಲಿ 300ಕ್ಕೂ ಹೆಚ್ಚು ಚಲನಚಿತ್ರಗಳಲ್ಲಿ ನಟಿಸಿದ್ದು, ಕನ್ನಡ ಹಾಗೂ ಭಾರತೀಯ ಚಲನಚಿತ್ರ ರಂಗಕ್ಕೆ ಅಪಾರ ಕೊಡುಗೆ ನೀಡಿದ್ದಾರೆ.

ಅನಂತ್ ನಾಗ್ ಅವರು ಜನಪ್ರಿಯ ಟೆಲಿವಿಷನ್ ಸರಣಿ 'ಮಾಲ್ಗುಡಿ ಡೇಸ್'ನಲ್ಲಿನ ತಮ್ಮ ಅಭಿನಯಕ್ಕೂ ಹೆಸರುವಾಸಿಯಾಗಿದ್ದಾರೆ. ಈ ಜನಪ್ರಿಯ ನಟನಿಗೆ 2025ರಲ್ಲಿ ಪದ್ಮಭೂಷಣ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗಿತ್ತು.

ಇನ್ನು ರಕ್ಷಿತ್ ಶೆಟ್ಟಿ ನಿರ್ಮಾಣದ ಕನ್ನಡದ 'ಮಿಥ್ಯ' 3 ಪ್ರಶಸ್ತಿಗಳನ್ನು, ತುಳುವಿನ 'ಇಂಬು' 1 ಪ್ರಶಸ್ತಿಯನ್ನು ಪಡೆದುಕೊಂಡಿದ್ದು, ಇಂದು ಚಿತ್ರತಂಡದವರು ರಾಷ್ಟ್ರಪತಿಗಳಿಂದ ಪ್ರಶಸ್ತಿಯನ್ನು ಸ್ವೀಕರಿಸಿದರು.

ಕನ್ನಡ ಚಿತ್ರರಂಗದ ಅತ್ಯಂತ ಜನಪ್ರಿಯ ನಟ ರಕ್ಷಿತ್ ಶೆಟ್ಟಿ ಮಾಲೀಕತ್ವದ ಪರಂವಃ ಸ್ಟುಡಿಯೋಸ್ ಮತ್ತು ಪ್ರಸಿದ್ಧ ಕೆಆರ್‌ಜಿ ಸ್ಟುಡಿಯೋಸ್ ಜಂಟಿಯಾಗಿ ನಿರ್ಮಾಣ ಮಾಡಿರುವ ಮಿಥ್ಯ ಸಿನಿಮಾ 3 ಪ್ರಶಸ್ತಿಗೆ ಪಾತ್ರವಾಗಿದೆ.

# ಬರ ತಾಲೂಕು 177ಕ್ಕೆ ಏರಿಕೆ

11 ತಾಲ್ಲೂಕುಗಳು ವಾಸ್ತವ ಪರಿಸ್ಥಿತಿಯ ಪರಿಶೀಲನೆಗೆ ಅರ್ಹತೆ ಪಡೆದಿವೆ. ವೈಜ್ಞಾನಿಕ ಪರಿಶೀಲನೆ, ಪಾರದರ್ಶಕ ಸಮೀಕ್ಷೆ ಮತ್ತು ನಿಖರ ವರದಿಯ ಆಧಾರದಲ್ಲಿ ಮುಂದಿನ ಕ್ರಮಗಳನ್ನು ಕೈಗೊಳ್ಳಲಾಗುವುದು' ಎಂದು ಹೇಳಿದರು.

'ಬರ ಪರಿಹಾರಕ್ಕೆ ನೆರವು ಕೋರಿ ಅಧಿವೇಶನ ಮುಗಿದ ತಕ್ಷಣ ಕೇಂದ್ರ್ರದ ಬಳಿಗೆ ಸರ್ವಪಕ್ಷ ನಿಯೋಗ ತೆಗೆದುಕೊಂಡು ಹೋಗಲಾಗುವುದು' ಎಂದರು. 'ಹಿಂದಿನ ಬರ ಪರಿಸ್ಥಿತಿಗಳೊಂದಿಗೆ ಈ ವರ್ಷದ ಅಂಕಿ-ಅಂಶಗಳನ್ನು ಹೋಲಿಕೆ ಮಾಡಲಾಗುತ್ತಿದೆ. ಈ ಬಾರಿ ಸರಾಸರಿ ಮಳೆ ಕೊರತೆ ಶೇ 36ರಷ್ಟಿದೆ. 200ಕ್ಕೂ ಹೆಚ್ಚು ತಾಲ್ಲೂಕುಗಳಲ್ಲಿ ಮಳೆಯ ಕೊರತೆ ಕಂಡುಬಂದಿದ್ದು, ಕೃಷಿ ಚಟುವಟಿಕೆ ಮತ್ತು ರೈತರ ಬದುಕಿನ ಮೇಲೆ ಗಂಭೀರ ಪರಿಣಾಮ ಬೀರಿದೆ. ಪರಿಸ್ಥಿತಿಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ಪರಿಸ್ಥಿತಿಗೆ ಅನುಗುಣವಾಗಿ ಮತ್ತಷ್ಟು ತಾಲ್ಲೂಕುಗಳನ್ನು ಸೇರ್ಪಡೆ ಮಾಡಲಾಗುವುದು' ಎಂದರು. 'ಕೇಂದ್ರ ಸರ್ಕಾರ 2020ರಲ್ಲಿ ರೂಪಿಸಿರುವ ಮಾರ್ಗಸೂಚಿಗಳ ಪ್ರಕಾರವೇ ಬರಪೀಡಿತ ಎಂದು ಘೋಷಿಸಬೇಕಾಗುತ್ತದೆ. ನೆಲಮಟ್ಟದ ಪರಿಸ್ಥಿತಿ, ಮಳೆ ಕೊರತೆ, ಬೆಳೆ ಹಾನಿ ಸೇರಿದಂತೆ ನಿಗದಿತ ಮಾನದಂಡಗಳ ಆಧಾರದಲ್ಲಿ ನಿರಂತರ ಮೌಲ್ಯಮಾಪನ ನಡೆಸಲಾಗುವುದು' ಎಂದರು.

'200 ತಾಲ್ಲೂಕುಗಳಲ್ಲಿ ಬರ ಘೋಷಣೆಯಾಗುವ ಸಾಧ್ಯತೆ ಇದ್ದು ಆ ಬಗ್ಗೆ ಅಗತ್ಯ ವರದಿಗಳು ಬರುತ್ತಿವೆ' ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸುದ್ದಿಗಾರರಿಗೆ ತಿಳಿಸಿದರು. 'ಗದಗವನ್ನು ಬರದ ಜಿಲ್ಲೆ ಎಂದು ಘೋಷಿಸದಿದ್ದರೆ ಶಾಸಕ ಸ್ಥಾನಕ್ಕೆ ರಾಜೀನಾಮೆ ಕೊಡುವುದಾಗಿ ಹೇಳಿರುವ ಎಚ್.ಕೆ.ಪಾಟೀಲರ ಮಾತಿಗೆ ಪ್ರತಿಕ್ರಿಯಿಸಿದ ಅವರು 'ಆ ಜಿಲ್ಲೆಯಲ್ಲಿ ಪ್ರವಾಸ ಮಾಡಿದ್ದೇನೆ. ಜೊತೆಗೆ ಪಾಟೀಲರೂ ಇದ್ದರು. ಅವರು ಹೇಳಿದ್ದು ಸತ್ಯ. ಮಲೆನಾಡಿನಲ್ಲೇ ಬರ ಬಂದಿರುವಾಗ ಗದಗದಲ್ಲಿ ಇರುವುದಿಲ್ಲವೇ? ಸಮಸ್ಯೆಯ ಅರಿವಿದೆ' ಎಂದರು. 'ವಿರೋಧ ಪಕ್ಷಗಳು ಹತ್ತು ದಿನದ ಅಧಿವೇಶನದ ಸಮಯ ವ್ಯರ್ಥ ಮಾಡಿದವು. ಅವರಿಗೆ ರಾಜಕಾರಣ ಮಾಡುವುದಷ್ಟೇ ಗೊತ್ತು. ನಾನು ಸಚಿವ ಸಂಪುಟ ಸಭೆ ಕರೆದು ತೀರ್ಮಾನಿಸಬಹುದಿತ್ತು. ಹಾಗೆ ಮಾಡದೆ ವಿಶೇಷ ಅಧಿವೇಶನ ಆಯೋಜಿಸಿ ಚರ್ಚೆಗೆ ಕರೆದಿರುವೆ' ಎಂದರು. 'ರೈತರು ಜನರೊಂದಿಗೆ ಮಾತನಾಡಿದ್ದೇನೆ. ಪ್ರವಾಸ ಮಾಡಿದ್ದೇನೆ. ಪರಿಸ್ಥಿತಿಯನ್ನು ಅರ್ಥ ಮಾಡಿಕೊಂಡಿದ್ದೇನೆ. ಆಗ ಸಮಯ ವ್ಯರ್ಥ ಮಾಡಿ ಈಗ ಹೆಚ್ಚಿಗೆ ಸಮಯ ಬೇಕೆಂದರೆ ಹೇಗೆ' ಎಂದು ಪ್ರಶ್ನಿಸಿದರು.

# ಕುರುಗೋಡು: ಸ್ವಂತ ವೆಚ್ಚದಲ್ಲಿ ಕಾಲುವೆ ಸ್ವಚ್ಛತೆ

ಕುರುಗೋಡು : ತಾಲ್ಲೂಕಿನ ಸೋಮಲಾಪುರ ಕ್ರಾಸ್‌ನಿಂದ ಓರ್ವಾಯಿ ಕ್ರಾಸ್‌ವರೆಗೆ ತೆರಳುವ ಮಾರ್ಗ ಮಧ್ಯೆ ಹರಿಯುವ ತುಂಗಭದ್ರಾ ನದಿಯ ಕಾಲುವೆಯನ್ನು ರೈತರು ಸ್ವಂತ ಖರ್ಚಿನಿಂದ ಸ್ವಚ್ಛಗೊಳಿಸಿದರು. ಮೂರು ದಿನ ಕಾರ್ಯಾಚರಣೆ ನಡೆಸಿ, ಕಾಲುವೆಯಲ್ಲಿ ಬೆಳೆದ ಮುಳ್ಳಿನ ಗಿಡ ಮತ್ತು ಸಂಗ್ರಹವಾದ ಹೂಳನ್ನು ತೆಗೆದು ಹಾಕಿದರು.

ಕಾಲುವೆಯ ಉಪ ವಿತರಣಾ ನಾಲೆಯು 16 ಕಿ.ಮೀ. ವ್ಯಾಪ್ತಿ ಹೊಂದಿದೆ. ತಿಮ್ಮಣ್ಣ ಕ್ಯಾಂಪ್, ರಾಮಚಂದ್ರಾಪುರ ಕ್ಯಾಂಪ್, ನಾಗಾರ್ಜುನ ಕ್ಯಾಂಪ್ ಮತ್ತು ಸೂಗೂರು ಗ್ರಾಮಗಳ ಮೂರು ಸಾವಿರ ಎಕರೆ ಭೂಮಿಯು ನೀರಾವರಿ ವ್ಯಾಪ್ತಿಗೆ ಒಳಪಟ್ಟಿದೆ.

'ಕಾಲುವೆಯಲ್ಲಿ ಸಂಗ್ರಹವಾದ ಹೂಳು ಮತ್ತು ದಟ್ಟವಾಗಿ ಬೆಳೆದ ಮುಳ್ಳಿನ ಗಿಡಗಳನ್ನು ಆಗಾಗ್ಗೆ ತೆರವುಗೊಳಿಸಬೇಕಿತ್ತು. ಆದರೆ, ನೀರಾವರಿ ಇಲಾಖೆ ಅಧಿಕಾರಿಗಳು ನಿರ್ಲಕ್ಷ್ಯ ತೋರಿದರು. ಇದರ ಪರಿಣಾಮ ಅಚ್ಚುಕಟ್ಟು ಪ್ರದೇಶದ ಮೇಲ್ಭಾಗದ ರೈತರು ಅನಧಿಕೃತವಾಗಿ ನೀರು ಬಳಸಿಕೊಂಡರೆ,



ಅಚ್ಚುಕಟ್ಟು ಪ್ರದೇಶದ ಕೆಳಭಾಗದ ರೈತರ ಜಮೀನುಗಳಿಗೆ ನೀರು ಸಿಗುತ್ತಿರಲಿಲ್ಲ. ಇದೆಲ್ಲದರ ಜೊತೆಗೆ ಬರ ಮತ್ತು ಬಿಸಿಲಿನಿಂದ ಕಂಗೆಟ್ಟಿದ್ದೆವು' ಎಂದು ರೈತರು ತಿಳಿಸಿದರು. 'ಕಾಲುವೆ ಸ್ವಚ್ಛತೆಗೆ ನಾವೇ ನಿರ್ಧರಿಸಿದೆವು. ರೈತರೆಲ್ಲ ಸೇರಿ 1.50 ಲಕ್ಷ ರೂಪಾಯಿ ಸಂಗ್ರಹಿಸಿ, ಜೆಸಿಬಿ ವಾಹನ ಮತ್ತು ಟ್ರ್ಯಾಕ್ಟರ್ ಬಳಸಿ ಸೆಪ್ಟೆಂಬರ್ 18 ರಿಂದ 20ರ ವರೆಗೆ ತೆರವು ಮತ್ತು ಸ್ವಚ್ಛತಾ ಕಾರ್ಯ ಕೈಗೊಂಡೆವು' ಎಂದು ರಾಮಚಂದ್ರಾಪುರ ಕ್ಯಾಂಪ್‌ನ ರೈತ ತಿರುಪತಿರಾವ್ ತಿಳಿಸಿದರು.

ರೈತರಾದ ಶಿವರುದ್ರಗೌಡ, ನಾಗರಾಜ, ಶಿವಪ್ಪ, ರಾಜು, ಜಡೇಶ, ಕಾಸೀಂ ಸಾಬ್, ರುದ್ರಪ್ಪ, ಮೌಲಪ್ಪ, ಕೃಷ್ಣ ಮತ್ತು ಮಲ್ಲಪ್ಪ ಅವರು ಸ್ವಚ್ಛತಾ ಕಾರ್ಯದಲ್ಲಿ ಭಾಗಿಯಾದರು.

# ಸತೀಶ್ ಜಾರಕಿಹೊಳಿ ಮೇಲಿನ ಆರೋಪ ರಾಜಕೀಯ ಪ್ರೇರಿತ

ಸಿರುಗುಪ್ಪ: ಲೋಕೋಪಯೋಗಿ ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ವಿರುದ್ಧ ಕೇಳಿಬಂದಿರುವ ಆರೋಪಗಳು ಆಧಾರರಹಿತ ಹಾಗೂ ರಾಜಕೀಯ ದುರುದ್ದೇಶದಿಂದ ಕೂಡಿವೆ ಎಂದು ಮಹರ್ಷಿ ವಾಲ್ಮೀಕಿ ವಿದ್ಯಾಭಿವೃದ್ಧಿ ಸಂಘದ ಅಧ್ಯಕ್ಷ ಬಿ.ಎಂ. ಸತೀಶ್ ಹೇಳಿದರು.

ನಗರದ ಮಹರ್ಷಿ ವಾಲ್ಮೀಕಿ ವಿದ್ಯಾಭಿವೃದ್ಧಿ ಟ್ರಸ್ಟ್ ಕಚೇರಿಯಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸತೀಶ್ ಜಾರಕಿಹೊಳಿ ಅವರು ಹಿಂದುಳಿದ, ಶೋಷಿತ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ



ಪಂಗಡಗಳ ಏಳಿಗೆಗೆ ಶ್ರಮಿಸುತ್ತಿದ್ದಾರೆ. ಮಾನವ ಬಂಧುತ್ವ ವೇದಿಕೆ ಮೂಲಕ ಸಮಾನತೆ, ಶಾಂತಿ ಮತ್ತು ಸೌಹಾರ್ದತೆಯ ಸಂದೇಶ ಸಾರುತ್ತಿದ್ದಾರೆ ಎಂದು ಹೇಳಿದರು.

ಅವರ ಸಮಾಜಮುಖಿ ಕಾರ್ಯ ಹಾಗೂ ಜನಪ್ರಿಯತೆಯನ್ನು ಸಹಿಸದೆ ರಾಜಕೀಯ ವಿರೋಧಿಗಳು ತೇಜೋವಧೆ ಮಾಡಲು ಸುಳ್ಳು ಆರೋಪ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಸಚಿವರ ಬೆಂಬಲಕ್ಕೆ ವಾಲ್ಮೀಕಿ ಸಮುದಾಯ ಹಾಗೂ ತಾಲ್ಲೂಕಿನ ಹಿಂದುಳಿದ ವರ್ಗಗಳ ನಾಯಕರು ನಿಲ್ಲಲಿದ್ದು, ಆರೋಪಗಳನ್ನು ಹಿಂಪಡೆಯದಿದ್ದರೆ ತಾಲ್ಲೂಕು ಹಾಗೂ ಜಿಲ್ಲಾದ್ಯಂತ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು.

# ಮೆಟ್ರಿ ಗ್ರಾಮದಲ್ಲಿ ಪ್ರಣವಜ್ಯೋತಿ ಮಹಾರಥೋತ್ಸವ ವಿಜೃಂಭಣೆ

ಕಂಪ್ಲಿ: ತಾಲ್ಲೂಕಿನ ಮೆಟ್ರಿ ಗ್ರಾಮದ ವಿಶ್ವಾರಾಧ್ಯ ಗುರುಕುಲ ಮಠದ 48ನೇ ವರ್ಷದ ಪ್ರಣವಜ್ಯೋತಿ ಮಹಾರಥೋತ್ಸವ ಸೋಮವಾರ ಸಂಜೆ ಭಕ್ತರ ಜಯಘೋಷದೊಂದಿಗೆ ವಿಜೃಂಭಣೆಯಿಂದ ನಡೆಯಿತು.

ಶ್ರೀಮಠದಿಂದ ಹೊರಟ ಮಹಾರಥವು ರಾಜ್ಯ ಹೆದ್ದಾರಿ-29ರ ಮೂಲಕ ಎದುರು ಬಸವಣ್ಣನವರ ದೇವಸ್ಥಾನದವರೆಗೆ ತೆರಳಿ, ಬಳಿಕ ಮಠಕ್ಕೆ ಮರಳಿತು. ತೇರು ಸಾಗುವಾಗ ಭಕ್ತರು ಹೂವು, ಹಣ್ಣು, ಉತ್ತತ್ತಿ ತೂರಿ ಭಕ್ತಿ ಸಮರ್ಪಿಸಿದರು.

ಕೊಪ್ಪಳ ಜಿಲ್ಲೆಯ ಚಿಲಕಮುಖಿ ಗ್ರಾಮದ ಶ್ರೀಶೈಲ ಮಲ್ಲಿಕಾರ್ಜುನ ಸಾಹಸ ಜಾನಪದ ಅಲೆಮಾರಿ ಕಲಾವಿದರ ಸಂಘದ ಗೊಂಬೆ ಕುಣಿತ, ತಾಸಿ ಪ್ರದರ್ಶನ ಹಾಗೂ ನಂದಿಕೋಲು, ಸಮಾಳ, ಡೊಳ್ಳು ಸೇರಿದಂತೆ ವಿವಿಧ ವಾದ್ಯಗಳ ಪ್ರದರ್ಶನ ಜಾತ್ರೆಗೆ ಮೆರಗು ನೀಡಿತು.

ಶ್ರಾವಣ ಮಾಸದ ಅಂಗವಾಗಿ ನಡೆದ 57ನೇ ವರ್ಷದ ಶಿವಶರಣ ತ್ರಿಕಾಲ ಜ್ಞಾನಿ ಎಮ್ಮಿಗನೂರು ಜಡಿಸಿದ್ದೇಶ್ವರ ಪುರಾಣ ಪ್ರವಚನದ ಮಹಾಮಂಗಲದ ಅಂಗವಾಗಿ ಎಚ್.ಎಂ. ವಿದ್ಯಾಧರಸ್ವಾಮಿ, ಸಹೋದರರು ಹಾಗೂ ಮಕ್ಕಳು ಬುಕ್ಕಸಾಗರ ವಿಶ್ವಾರಾಧ್ಯ ಶಿವಾಚಾರ್ಯರ ತುಲಾಭಾರ ನೆರವೇರಿಸಿದರು.



ಇದಕ್ಕೂ ಮುನ್ನ ಪಂಚಪೀಠಾಧೀಶ್ವರರ ಶಿಲಾಮೂರ್ತಿ, ಉಜ್ಜಯಿನಿ ಸಿದ್ದಲಿಂಗೇಶ್ವರ, ಎಮ್ಮಿಗನೂರು ಜಡೆಸಿದ್ದೇಶ್ವರ, ನವಗ್ರಹ, ಗಣೇಶ ಹಾಗೂ ಮಠದ ಸಂಸ್ಥಾಪಕರಾದ ವೇದಮೂರ್ತಿ ಮಹಾದೇವತಾತ, ಗೌರಮ್ಮ ಅವ್ವನವರ ಶಿಲಾಮೂರ್ತಿಗಳಿಗೆ ವಿಶೇಷ ರುದ್ರಾಭಿಷೇಕ, ಗಂಗೆಸ್ಥಳ ಮಹೋತ್ಸವ, ಹೋಮ-ಹವನ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆದವು.

ಸೆ.17ರಿಂದ 20ರವರೆಗೆ ಪಂಚಪೀಠಾಧೀಶ್ವರರ ಉತ್ಸವ ಮೂರ್ತಿ ಅಡ್ಡಪಲ್ಲಕ್ಕಿ, ಪ್ರಣವೋತ್ಸವ, ಗೋವೋತ್ಸವ, ಭಸ್ಮೋತ್ಸವ ಹಾಗೂ ಗೀತೋತ್ಸವ ಕಾರ್ಯಕ್ರಮಗಳು ಜರುಗಿದವು.

# ರೈತರ ಪಂಪ್‌ಸೆಟ್‌ಗಳಿಗೆ ನಿರಂತರ ವಿದ್ಯುತ್ ಪೂರೈಕೆಗೆ ಆಗ್ರಹಿಸಿ ಧರಣಿ



ತೆಕ್ಕಲಕೋಟೆ: ರೈತರ ಪಂಪ್‌ಸೆಟ್‌ಗಳಿಗೆ ನಿರಂತರ 7 ಗಂಟೆ ವಿದ್ಯುತ್ ಪೂರೈಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಸಿರು ಸೇನೆ ನೇತೃತ್ವದಲ್ಲಿ ಸಮೀಪದ ಸಿರಿಗೇರಿ ಕ್ರಾಸ್‌ನಲ್ಲಿ ಸೋಮವಾರ ರೈತರು ಧರಣಿ ನಡೆಸಿದರು.

ಕರ್ನಾಟಕ ರಾಜ್ಯ ರೈತ ಸಂಘ ಹಸಿರು ಸೇನೆ ಅಧ್ಯಕ್ಷ ಆರ್. ಮಾಧವರೆಡ್ಡಿ ಕರೂರು ಮಾತನಾಡಿ, ಒಂದೆಡೆ ಭೀಕರ ಬರಗಾಲ ಹಾಗೂ ಮತ್ತೊಂದೆಡೆ ವೇದಾವತಿ ಮತ್ತು ತುಂಗಭದ್ರ ನದಿ ಪಾತ್ರದಲ್ಲಿ ನೀರಿನ ಕೊರತೆಯಿಂದ ರೈತರು ಸಂಕಷ್ಟದಲ್ಲಿದ್ದಾರೆ. ಇಂತಹ ಸಂದರ್ಭದಲ್ಲಿ ಜೆಸ್ಕಾಂ ಅಧಿಕಾರಿಗಳು ಕೇವಲ 6 ಗಂಟೆ ವಿದ್ಯುತ್ ಪೂರೈಸುತ್ತಿರುವುದು ಅನ್ಯಾಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಚಾಗನೂರು ಸಿರಿವಾರ ಹೋರಾಟ ಸಮಿತಿ ಅಧ್ಯಕ್ಷ ಮಲ್ಲಿಕಾರ್ಜುನ ರೆಡ್ಡಿ ಮಾತನಾಡಿ, ಹಗಲು ಗ್ರಾಮಗಳಲ್ಲಿ ವಿದ್ಯುತ್ ದೀಪಗಳು ಉರಿಯುತ್ತಿವೆ. ರೈತರಿಗೆ ವಿದ್ಯುತ್ ಕೇಳಿದಾಗ ಮಾತ್ರ ಲೋಡ್‌ಶೆಡ್ಡಿಂಗ್ ನೆಪ ಹೇಳಲಾಗುತ್ತಿದೆ ಎಂದು ಆರೋಪಿಸಿದರು.

ಸುತ್ತಮುತ್ತಲಿನ ಗ್ರಾಮಗಳ ನೂರಾರು ರೈತರು ಎತ್ತಿನ ಬಂಡಿ ಹಾಗೂ ಟ್ರ್ಯಾಕ್ಟರ್‌ಗಳಲ್ಲಿ ಆಗಮಿಸಿ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಅಧಿಕಾರಿಗಳಿಗೆ ದಿಗ್ಬಂಧನ: ಯಾವುದೇ ಆದೇಶವಿಲ್ಲದೆ 7 ಗಂಟೆಯ ವಿದ್ಯುತ್ ಪೂರೈಕೆಯನ್ನು 6 ಗಂಟೆಗೆ ಇಳಿಸಿರುವುದೇಕೆ ಎಂದು ರೈತರು ಜೆಸ್ಕಾಂ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ತಕ್ಷಣ 7 ಗಂಟೆ ವಿದ್ಯುತ್ ಪೂರೈಸುವ ಕ್ರಮ ಕೈಗೊಳ್ಳದಿದ್ದರೆ ಸ್ಥಳದಿಂದ ಕದಲುವುದಿಲ್ಲ ಎಂದು ಎಚ್ಚರಿಸಿ ಅಧಿಕಾರಿಗಳಿಗೆ ದಿಗ್ಬಂಧನ ಹಾಕಿದರು.

ವಿದ್ಯುತ್ ಉತ್ಪಾದನೆ ಕೊರತೆಯಿಂದ ತಾತ್ಕಾಲಿಕವಾಗಿ 6 ಗಂಟೆ ವಿದ್ಯುತ್ ಪೂರೈಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ಲಭ್ಯತೆ-ಯ ಆಧಾರದ ಮೇಲೆ ಕ್ರಮ ಕೈಗೊಳ್ಳಲಾಗುವುದು ಎಂದು ಬಳ್ಳಾರಿ ಜಿಲ್ಲಾ ಕಾರ್ಯನಿರ್ವಾಹಕ ಎಂಜಿನಿಯರ್ (ಗ್ರಾಮೀಣ) ಹುಸೇನ್ ಸಾಬ್ ಭರವಸೆ ನೀಡಿದರು.

ಆದರೆ ಅಧಿಕಾರಿಯ ಉತ್ತರಕ್ಕೆ ತೃಪ್ತರಾಗದ ರೈತರು, 7 ಗಂಟೆ ವಿದ್ಯುತ್ ಪೂರೈಸುವ ಕುರಿತು ಲಿಖಿತ ಭರವಸೆ ನೀಡುವವರೆಗೆ ದಿಗ್ಬಂಧನ ಮುಂದುವರಿಸುವುದಾಗಿ ತಿಳಿಸಿದರು.

ರೈತ ಮುಖಂಡರಾದ ಸದಾಶಿವಪ್ಪ, ಹಂಪನಗೌಡ, ಉಮೇಶ, ಕೋಸೆರಾವು, ಅಂಜಿನಪ್ಪ, ಓಂಕಾರಿ, ತಿಮ್ಮಾರೆಡ್ಡಿ, ಜನಾರ್ಧನ ರೆಡ್ಡಿ, ಸೂರಿಬಾಬು ಸೇರಿದಂತೆ ಹಲವರು ಇದ್ದರು.

# ಅಂತರಾಷ್ಟ್ರೀಯ ಶಾಂತಿ ದಿನಾಚರಣೆ ಜಾಥಾ



ಧಾರವಾಡ : ಶ್ರೀ ಸಾಯಿ ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯ ಮತ್ತು ರಾಷ್ಟ್ರೀಯ ಸೇವಾ ಯೋಜನೆ ಘಟಕ ಸಹಯೋಗದೊಂದಿಗೆ ಅಂತರಾಷ್ಟ್ರೀಯ ಶಾಂತಿ ದಿನಾಚರಣೆ ಜಾಥಾ ಕಾರ್ಯಕ್ರಮ ನೆರವೇರಿತು. ಜಾಥಾ ಕಾರ್ಯಕ್ರಮಕ್ಕೆ ಸಂಸ್ಥೆಯ ಅಧ್ಯಕ್ಷರಾದ ಡಾ ವೀಣಾ ಬಿರಾದಾರ ಹಾಗೂ ಹನುಮಂತ ಉಪ್ಪಾರ ಮುಖ್ಯೋಪಾಧ್ಯಾಯರು, ಆದರ್ಶ ವಿದ್ಯಾಲಯ ಅವರು ಚಾಲನೆ ನೀಡಿದರು. ಘೋಷಣೆಗಳೊಂದಿಗೆ ಜಾಥಾದಲ್ಲಿ ವಿದ್ಯಾರ್ಥಿಗಳು ಮತ್ತು ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿಗಳು ಇದ್ದರು.

# ನಾಟಕಗಳು ಮನುಷ್ಯನನ್ನು ಹೊಸ ಆಲೋಚನೆಗೆ ಪ್ರೇರಣೆ ನೀಡುತ್ತವೆ : ಯೋಗಾನಂದ ರೆಡ್ಡಿ



ಬಳ್ಳಾರಿ : ನಾಟಕಗಳು ಮನರಂಜನೆಯ ಜೊತೆಗೆ ಸಾಮಾಜಿಕ ಎಚ್ಚರ ಮೂಡಿಸುವುದರೊಂದಿಗೆ ಮನುಷ್ಯನಿಗೆ ಹೊಸ ಆಲೋಚನೆಗಳಿಗೆ ಪ್ರೇರಣೆ ನೀಡುತ್ತವೆ ಎಂದು ಸಂಗಂ ಟ್ರಸ್ಟ್ ಅಧ್ಯಕ್ಷ ಡಾ. ವೈ.ಸಿ. ಯೋಗಾನಂದ ರೆಡ್ಡಿ ಹೇಳಿದರು.

ನಗರದ ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಸೋಮವಾರ ಸಂಜೆ ಧಾತ್ರಿ ರಂಗ ಸಂಸ್ಥೆ ಆಯೋಜಿಸಿದ್ದ ನಟ ಪ್ರಕಾಶ್ ರಾಜ್ ಸಾರಥ್ಯದ ನಿರ್ದಿಗಂತ ತಂಡದ ಪ್ರಾಜೆಕ್ಟ್ ಪಂಚತಂತ್ರ ನಾಟಕದ ಉದ್ಘಾಟನಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಬಳ್ಳಾರಿ ನಗರದಲ್ಲಿ ಹೊಸ ಅಲೆಯ ನಾಟಕಗಳ ಪ್ರದರ್ಶನ ಹೆಚ್ಚಾಗಬೇಕು. ರಂಗಾಸಕ್ತರು ನಾಟಕಗಳನ್ನು ಪ್ರೋತ್ಸಾಹಿಸುವ ಮೂಲಕ ರಂಗಭೂಮಿಯ ಬೆಳವಣಿಗೆಗೆ ಕೈಜೋಡಿಸಬೇಕು ಎಂದು ಅವರು ಕರೆ ನೀಡಿದರು. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ. ನಾಗರಾಜ್, ರಂಗಭೂಮಿ ಇಂದು ಹಲವು ಬಿಕ್ಕಟ್ಟುಗಳನ್ನು ಎದುರಿಸುತ್ತಿದೆ. ಕಲೆ ಮತ್ತು ಕಲಾವಿದರನ್ನು ಪ್ರೋತ್ಸಾಹಿಸುವ ಮೂಲಕ ಕಲೆಯ ಉಳಿವಿಗೆ ಎಲ್ಲರೂ ಶ್ರಮಿಸಬೇಕು ಎಂದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡ ಲೇಖಕ ಸಿದ್ದರಾಮ ಕಲ್ಮಠ, ಬಳ್ಳಾರಿಯಂತಹ ಪ್ರದೇಶದಲ್ಲಿ ಇತ್ತೀಚೆಗೆ ರಂಗ ಚಟುವಟಿಕೆಗಳು ಚುರುಕುಗೊಂಡಿರುವುದು ಆಶಾದಾಯಕ ಬೆಳವಣಿಗೆ ಎಂದರು.

ವೇದಿಕೆಯಲ್ಲಿ ನಾಟಕ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಪುರುಷೋತ್ತಮ ಹಂದಿಹಾಳು, ಭಾವೈಕ್ಯತೆ ವೇದಿಕೆಯ ಪಿ. ಅಬ್ದುಲ್ಲಾ, ಕಲಾವಿದ ಎ.ಎಂ.ಪಿ. ವೀರೇಶಸ್ವಾಮಿ ಹಾಗೂ ನಿರ್ದೇಶಕ ಶಕೀಲ್ ಅಹ್ಮದ್ ಉಪಸ್ಥಿತರಿದ್ದರು.

ಧಾತ್ರಿ ಸಂಸ್ಥೆಯ ಕಾರ್ಯದರ್ಶಿ ಮಂಜು ಸಿರಿಗೇರಿ ಕಾರ್ಯಕ್ರಮ ನಿರ್ವಹಿಸಿದರು. ಆಲಾಪ ಸಂಸ್ಥೆಯ ರಮಣಪ್ಪ, ಜಿಲ್ಲಾ ಕಲಾವಿದರ ಸಂಘದ ಅಧ್ಯಕ್ಷ ಯಲ್ಲನಗೌಡ, ಕಲಾವಿದ ತಿಪ್ಪೇಸ್ವಾಮಿ ಮುದ್ದಟನೂರು, ಸಂಗಂ ಟ್ರಸ್ಟ್ ಕಾರ್ಯದರ್ಶಿ ಶಿವಲಿಂಗಪ್ಪ ಹಂದಿಹಾಳು, ಲೇಖಕರಾದ ದಸ್ತಗೀರಸಾಬ್ ದಿನ್ನಿ ಹಾಗೂ ವೀರೇಂದ್ರ ರಾವಿಹಾಳು ಉಪಸ್ಥಿತರಿದ್ದರು. ನಂತರ ನಡೆದ 'ಪ್ರಾಜೆಕ್ಟ್ ಪಂಚತಂತ್ರ' ನಾಟಕವು ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರವಾಯಿತು.

# ಮೃತಪಟ್ಟ ಪೌರಕಾರ್ಮಿಕರ ಕುಟುಂಬದವರಿಗೆ ನೇರ ಪಾವತಿ ಹುದ್ದೆ ನೀಡಲು ಮನವಿ

ಬಳ್ಳಾರಿ : ಬಳ್ಳಾರಿ ಮಹಾನಗರ ಪಾಲಿಕೆಯಲ್ಲಿ ಯುಜಿಡಿ ಹೆಲ್ಪರ್, ಲೋಡರ್, ಕ್ಲೀನರ್ ಸೇರಿದಂತೆ ಹೊರಗುತ್ತಿಗೆ ಹಾಗೂ ನೇರಪಾವತಿ ಅಡಿಯಲ್ಲಿ ಕೆಲಸ ನಿರ್ವಹಿಸಿ ಮೃತಪಟ್ಟಿರುವ ಕಾರ್ಮಿಕರ ಕುಟುಂಬದ ಸದಸ್ಯರನ್ನು ನೇರ ಪಾವತಿ ಪೌರಕಾರ್ಮಿಕರ ಹುದ್ದೆಗಳಿಗೆ ನೇಮಕ ಮಾಡಿಕೊಳ್ಳುವಂತೆ ಸೇವಾ ಅವಧಿಯಲ್ಲಿ ಮೃತಪಟ್ಟ ಕಾರ್ಮಿಕರ ಕುಟುಂಬಸ್ಥರು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ನಗರಾಭಿವೃದ್ಧಿ ಇಲಾಖೆ ಹಾಗೂ ಪೌರಾಡಳಿತ ನಿರ್ದೇಶನಾಲಯದ ಆದೇಶದಂತೆ ಅರ್ಹ ಕುಟುಂಬದ ಸದಸ್ಯರಿಗೆ ನೇರ ಪಾವತಿ ಪೌರಕಾರ್ಮಿಕರ ಹುದ್ದೆಗಳಲ್ಲಿ ಅವಕಾಶ ಕಲ್ಪಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಯಿತು.

ಈ ಸಂದರ್ಭದಲ್ಲಿ ಸಮಾನತೆ ಯೂನಿಯನ್ ಕರ್ನಾಟಕದ ಸಂಚಾಲಕ ರಾಮಚಂದ್ರ, ಯು-ಜಿಡಿ ಹೆಲ್ಪರ್‌ಗಳಾದ ಬಿ. ವಿಜಯಕುಮಾರ್, ಬಿ. ಗುಡುಡಯ್ಯ ಸೇರಿದಂತೆ ಇತರರಿ ದ್ದರು.

# ದಲಿತರ ಮೇಲಿನ ದೌರ್ಜನ್ಯ ಘಟನೆಗಳನ್ನು ಸಿಐಡಿ ತನಿಖೆಗೆ ಕೊಡಿ: ಪ್ರಭುರಾಜ್ ಕೂಡ್ಲಿ ಆಗ್ರಹ




ಬಳ್ಳಾರಿ : ಇತ್ತೀಚೆಗೆ ರಾಜ್ಯದಲ್ಲಿ ದಲಿತರ ಮೇಲೆ ದೌರ್ಜನ್ಯಗಳು ಹೆಚ್ಚಾಗುತ್ತಿದ್ದು ಅಧಿಕಾರಿಗಳು ಮತ್ತು ರಾಜಕಾರಣಿಗಳು ಈ ಘಟನೆಗಳ ಬಗ್ಗೆ ನಿರ್ಲಕ್ಷ್ಯ ವಹಿಸಿದ್ದಾರೆ ಇದು ಖಂಡನೀಯ ಸಂಗತಿಯಾಗಿದೆ ಸರ್ಕಾರ ಕೂಡಲೇ ಇಂತಹ ದುರ್ಘಟನೆಗಳ ಕುರಿತು ಸಿಐಡಿ ತನಿಖೆಗೆ ಆದೇಶಿಸಬೇಕೆಂದು ಕರ್ನಾಟಕ ಪ್ರದೇಶ ಮಾದಿಗರ ಸಂಘದ ರಾಜ್ಯಾಧ್ಯಕ್ಷ ಪ್ರಭುರಾಜ್ ಕೂಡ್ಲಿ ಆಗ್ರಹಿಸಿದರು.

ಈ ಕುರಿತು ಅವರು ನಗರದ ಪತ್ರಿಕಾ ಭವನದಲ್ಲಿ ಮಂಗಳವಾರದಂದು ಸುದ್ದಿಗೋಷ್ಠಿಯನ್ನು ನಡೆಸಿ ಮಾತನಾಡಿ, ರಾಜ್ಯದ ಚಿತ್ರದುರ್ಗ ಬಳ್ಳಾರಿ ರಾಯಚೂರು ಜಿಲ್ಲೆ ಸೇರಿದಂತೆ ಮೂರು ತಿಂಗಳಲ್ಲಿ 12 ಜನ ದಲಿತರ ಮೇಲೆ ಅಪಹರಣ ಅತ್ಯಾಚಾರ ಮತ್ತು ಕೊಲೆಗಳು ಅಂತ ದುರ್ಘಟನೆಗಳು ಜರುಗಿವೆ ಎಂದರೆ ರಾಜ್ಯ ಸರ್ಕಾರದ ಗೃಹ ಇಲಾಖೆಯ ವೈಫಲ್ಯವನ್ನು ಎತ್ತಿ ತೋರಿಸುತ್ತದೆ ಗೃಹ ಸಚಿವ ಒಬ್ಬ ದಲಿತರಾಗಿ ಇಂತ ಘಟನೆಗಳನ್ನು ಗಂಭೀರವಾಗಿ ಪರಿಗಣಿಸಿದೆ ನಿರ್ಲಕ್ಷ್ಯ ವಹಿಸಿರುತ್ತಾರೆ ಎಂದು ಪ್ರಭುರಾಜ್ ಅಸಮಾಧಾನವನ್ನು ವ್ಯಕ್ತಪಡಿಸಿದರು. ಗೃಹ ಮಂತ್ರಿ ಪ್ರಿಯಾಂಕರ್ ಗೆ ಅವರು ರಾಜ್ಯದ ತುಂಬೆಲ್ಲ ಬೇಕಿಲ್ಲದ ವಿಷಯಗಳ ಬಗ್ಗೆ ಮಾತನಾಡುತ್ತಾರೆ ತನ್ನದೇ ಸಮುದಾಯದ ಜನರ ಮೇಲೆ ನಡೆಯುತ್ತಿರುವ ದೌರ್ಜನ್ಯದ ಬಗ್ಗೆ ಮಾತನಾಡುತ್ತಿಲ್ಲ ಇದು ಖರ್ಗೆ ಅವರಿಗೆ ತಮ್ಮ ಸಮುದಾಯದ ಮೇಲಿರುವ ನಿಷ್ಕಾಳಜಿ ಮತ್ತು ಬೇಜವಾಬ್ದಾರಿತನವನ್ನು ಎತ್ತಿ ತೋರಿಸುತ್ತದೆ ಎಂದರು. ಇತ್ತೀಚೆಗೆ ತುಮಕೂರು ಜಿಲ್ಲೆಯ ಮಧುಗಿರಿ ತಾಲೂಕಿನಲ್ಲಿ ಗಣೇಶ್ ಹಬ್ಬದ ನೆಪದಲ್ಲಿ ಸಿಂಹಾದ್ರಿ ಎಂಬ ದಲಿತ ಯುವಕನ ಕೊಲೆಯಾಗಿದೆ ಇದು ಮೇಲ್ನೋಟಕ್ಕೆ ಗಣೇಶ ಹಬ್ಬ ನೆಪವಾದರೂ ಇದರ ಹಿಂದೆ ಷಡ್ಯಂತರ ಅಡಗಿದೆ ಎಂದು ಅನುಮಾನವನ್ನು ವ್ಯಕ್ತಪಡಿಸಿದ ಕೂಡ್ಲಿ ಈ ಘಟನೆಯನ್ನು ಸರ್ಕಾರ ಸಿಐಡಿ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಉಗ್ರ ಕಾನೂನು ಕ್ರಮ ಕೈಗೊಳ್ಳಬೇಕು ಮತ್ತು ಈ ಘಟನೆಯಲ್ಲಿ ಸಂಪೂರ್ಣವಾಗಿ ಪೋಲಿಸ್ ಇಲಾಖೆಯ ನಿರ್ಲಕ್ಷ ಎದ್ದು ಕಾಣುತ್ತದೆ ಆರೋಪಿಗಳನ್ನು ಶೀಘ್ರವೇ ಬಂಧಿಸಿ ಸಂತ್ರಸ್ತ ಕುಟುಂಬಸ್ತರಿಗೆ ಸೂಕ್ತ ರಕ್ಷಣೆ ಕಲ್ಪಿಸಬೇಕು ಮತ್ತು ಇಂಥ ಪ್ರಕರಣಗಳನ್ನು ವಿಚಾರಣೆ ಮಾಡಲು ಸರ್ಕಾರ ರಾಜ್ಯದಲ್ಲಿ ಫಾಸ್ಟಾಕ್ ಕೋರ್ಟ್ ಗಳನ್ನು ಆರಂಭಿಸಬೇಕೆಂದು ಒತ್ತಾಯಿಸಿದರು.

ಈ ಪತ್ರಿಕಾಗೋಷ್ಠಿಯಲ್ಲಿ ಮರಿಯಪ್ಪ ಎಸ್, ಎರಗುಡಿ ಶಿವಶಂಕರ್, ಪ್ರತಾಪ್, ಲಕ್ಷ್ಮಣ್ ಭಂಡಾರಿ, ಕಪ್ಪಗಲ್ ಹುಲಿಯಪ್ಪ, ಈಶ್ವರಗುಡಿ ರಾಜೇಶ್ ಸೇರಿದಂತೆ ಹಲವಾರು ಇದ್ದರು

# ಜಿಲ್ಲಾ ಮಟ್ಟದ 'ದಸರಾ ಕ್ರೀಡಾಕೂಟ: ಕ್ರೀಡಾ ಮನೋಭಾವಕ್ಕೆ ಕರೆ



ಬಳ್ಳಾರಿ: ಜಿಲ್ಲೆಯಲ್ಲಿ ಕ್ರೀಡಾ ಮೂಲಸೌಕರ್ಯಗಳನ್ನು ಬಲಪಡಿಸಲು ಕೆ.ಎಂ.ಇ.ಆರ್.ಸಿ ಅನುದಾನದಡಿ ಸುಮಾರು 75 ಕೋಟಿಯಿಂದ 100 ಕೋಟಿ ರೂ. ಗೂ ಅಧಿಕ ಹಣವನ್ನು ಒದಗಿಸಲಾಗುತ್ತಿದ್ದು, ಡಿ.ಎಂ.ಎಫ್ ನಿಧಿಯ ಮೂಲಕವೂ ಹೆಚ್ಚುವರಿ ಸೌಲಭ್ಯಗಳನ್ನು ಕಲ್ಪಿಸಲು ಯೋಜನೆ ರೂಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಂಯುಕ್ತಾಶ್ರಯದಲ್ಲಿ 'ನಾಡ ಹಬ್ಬದ ಸಡಗರ ಕ್ರೀಡೆಯ ಸಂಭ್ರಮ!' ಧ್ಯೇಯದೊಂದಿಗೆ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಮಂಗಳವಾರ ಹಮ್ಮಿಕೊಳ್ಳಲಾಗಿದ್ದ ಜಿಲ್ಲಾ ಮಟ್ಟದ 'ದಸರಾ ಕ್ರೀಡಾಕೂಟ ಹಾಗೂ ಸಿ.ಎಂ. ಕಪ್ 2026' ಗೆ ಚಾಲನೆ ನೀಡಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಒಳಾಂಗಣ ಮತ್ತು ಹೊರಾಂಗಣ ಕ್ರೀಡಾಂಗಣಗಳು ಹಾಗೂ 2014ರಲ್ಲಿ ಜೆಎಸ್‌ಡಬ್ಲ್ಯೂ ಸಹಯೋಗದೊಂದಿಗೆ ಬಿಡಿಎಎ ಮೈದಾನ ನಿರ್ಮಾಣಗೊಂಡಿವೆ. ಡಿಎಂಎಫ್ ವತಿಯಿಂದ ಸಿರುಗುಪ್ಪದಲ್ಲಿ ಕ್ರೀಡಾಂಗಣ ನಿರ್ಮಿಸಲಾಗಿದೆ. ಕೆಕೆಆರ್‌ಡಿಬಿ ವತಿಯಿಂದ 7 ಕೋಟಿ ರೂ. ವೆಚ್ಚದಲ್ಲಿ ಕಂಪ್ಲಿ ಮತ್ತು ಕುರುಗೋಡಿನಲ್ಲಿ ಒಳಾಂಗಣ ಕ್ರೀಡಾಂಗಣಗಳ ನಿರ್ಮಾಣ ಕಾರ್ಯ ಕೈಗೆತ್ತಿಕೊಳ್ಳಲಾಗಿದೆ.

ಕೆಎಂಆರ್‌ಸಿ ವತಿಯಿಂದ ಬಳ್ಳಾರಿ ಹಾಗೂ ಸಿರುಗುಪ್ಪದಲ್ಲಿ 27 ಕೋಟಿ ಮತ್ತು ಸಂಡೂರಿನಲ್ಲಿ 24 ಕೋಟಿ ರೂ. ವೆಚ್ಚದಲ್ಲಿ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದು ಕ್ರೀಡಾ ಇಲಾಖೆಯ ಅಭಿವೃದ್ಧಿ ಕಾರ್ಯಗಳ ಮಾಹಿತಿ ನೀಡಿದರು.

ಏಷ್ಯನ್ ಗೇಮ್ಸ್, ಪ್ಯಾರಾ ಒಲಿಂಪಿಕ್ಸ್ ಸೇರಿದಂತೆ ವಿವಿಧ ಹಂತಗಳಲ್ಲಿ ವಿಜೇತರಾದ ಜಿಲ್ಲೆಯ ಕ್ರೀಡಾಪಟುಗಳಿಗೆ ಇಲಾಖೆಯಿಂದ ನಿರಂತರ ಪ್ರೋತ್ಸಾಹ ನೀಡಲಾಗುತ್ತಿದೆ ಎಂದು ಅಭಿಮತ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ವಿವಿಧ ಕ್ರೀಡೆಗಳಲ್ಲಿ ವಿಜೇತರಾದ ಕ್ರೀಡಾಪಟುಗಳನ್ನು ಸಾಂಕೇತಿಕವಾಗಿ ಸನ್ಮಾನಿಸಿ ಗೌರವಿಸಲಾಯಿತು. ಇದಕ್ಕೂ ಮುನ್ನ ಜಿಲ್ಲಾಧಿಕಾರಿಯವರು, ಕ್ರೀಡಾ ಧ್ವಜಾರೋಹಣ ನೆರವೇರಿಸಿ, ಕ್ರೀಡಾ ದೀಪ ಬೆಳಗಿಸಿದರು. ಬಳಿಕ ಕ್ರೀಡಾಕೂಟಗಳು ನಡೆದವು. ಕ್ರೀಡಾಪಟುಗಳಿಗೆ ನೋಂದಣಿ ವ್ಯವಸ್ಥೆ ಮಾಡಲಾಗಿತ್ತು.

ಈ ವೇಳೆ ಫುಟ್ ಬಾಲ್ ಅಸೋಶಿಯೇಶನ್ ನ ನಿರಂಜನ್, ಭಾರತೀಯ ಸೇವಾದಳದ ಗಣೇಶ್ ಬಾರೀಕರ ಸೇರಿದಂತೆ ಕ್ರೀಡಾಪಟುಗಳು ಹಾಗೂ ಇತರರು ಇದ್ದರು.

# ಬಾಕಿ ವೇತನ ಬಿಡುಗಡೆಗೆ ಎಐಟಿಯುಸಿ ಪ್ರತಿಭಟನೆ




ಬಳ್ಳಾರಿ : ಜಿಲ್ಲೆಯ ವಿವಿಧ ಹಾಸ್ಟೆಲ್ ಗಳಲ್ಲಿ ಅಡುಗೆ ಸ್ವಚ್ಛತೆ ಸೇರಿದಂತೆ ಇತರೆ ಕೆಲಸ ಮಾಡುತ್ತಿರುವ ಕಾರ್ಮಿಕರಿಗೆ ಜುಲೈ ಮತ್ತು ಆಗಸ್ಟ್ ಎರಡು ತಿಂಗಳ ಬಾಕಿ ವೇತನವನ್ನು ಕೂಡಲೇ ಬಿಡುಗಡೆ ಮಾಡಬೇಕು ಹಾಗೂ ಪರಿಷ್ಕೃತ ಕನಿಷ್ಠ ವೇತನ ಜಾರಿಗೊಳಿಸಬೇಕು ಎಂದು ಒತ್ತಾಯಿಸಿ ಂಖಗಖಿಗಅ ಸಂಯೋಜಿತ ಕರ್ನಾಟಕ ರಾಜ್ಯ ಸಂಯುಕ್ತ ವಸತಿನಿಲಯ ಕಾರ್ಮಿಕರ ಸಂಘದ ಬಳ್ಳಾರಿ ಜಿಲ್ಲಾ ಸಮಿತಿ ಪ್ರತಿಭಟನಾ ಧರಣಿಯನ್ನು ನಡೆಸಿ ಆಗ್ರಹಿಸಿತು. ಸಂಘದ ವತಿಯಿಂದ ಮಂಗಳವಾರ ಜಿಲ್ಲಾ ಪಂಚಾಯತ್ ಆವರಣದಲ್ಲಿ ಪ್ರತಿಭಟನೆ ನಡೆಸಿದ ಸಂಘಟನೆಯ ಪದಾಧಿಕಾರಿಗಳು ಮತ್ತು ಹಾಸ್ಟೆಲ್ ಕಾರ್ಮಿಕರು ಜಿಲ್ಲಾ ಪಂಚಾಯತ್ ಕಾರ್ಯ ನಿರ್ವಹಣಾ ಅಧಿಕಾರಿ ಮಹಮ್ಮದ್ ಯಾರಿ ಸುನೀರ್ ಅವರಿಗೆ ಮನವಿ ಪತ್ರವನ್ನು ಸಲ್ಲಿಸಿ, ಸಮಾಜ ಕಲ್ಯಾಣ, ಪರಿಶಿಷ್ಟ ವರ್ಗಗಳ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ ವ್ಯಾಪ್ತಿಯ ವಸತಿ ಶಾಲೆ ಮತ್ತು ವಸತಿನಿಲಯಗಳಲ್ಲಿ ಮುಖ್ಯ ಅಡುಗೆಯವರು, ಅಡುಗೆ ಸಹಾಯಕರು, ಕಾವಲುಗಾರರು ಸೇರಿದಂತೆ ಕಾರ್ಮಿಕರು ನಿರಂತರವಾಗಿ ಸೇವೆ ಸಲ್ಲಿಸುತ್ತಿದ್ದಾರೆ. ವಿದ್ಯಾರ್ಥಿಗಳಿಗೆ ಅಡುಗೆ ತಯಾರಿಸುವುದು, ಊಟ ಬಡಿಸುವುದು ಸೇರಿದಂತೆ ಹಲವು ಶ್ರಮದಾಯಕ ಕೆಲಸಗಳನ್ನು ನಿರ್ವಹಿಸುತ್ತಿದ್ದರೂ ವೇತನ ಮಾತ್ರ ಸಕಾಲಕ್ಕೆ ಪಾವತಿಯಾಗುತ್ತಿಲ್ಲ ಎಂದು ಪ್ರತಿಭಟನಾಕಾರರು ಅಸಮಾಧಾನ ವ್ಯಕ್ತಪಡಿಸಿದರು.ಪ್ರತಿ ತಿಂಗಳ 5ನೇ ತಾರೀಖಿನೊಳಗೆ ವೇತನ ಪಾವತಿಸಬೇಕೆಂಬ ಆದೇಶವಿದ್ದರೂ ಅದನ್ನು ಸಮರ್ಪಕವಾಗಿ ಪಾಲಿಸಲಾಗುತ್ತಿಲ್ಲ. ಎರಡು ತಿಂಗಳ ವೇತನ ಬಾಕಿಯಿಂದಾಗಿ ಕಾರ್ಮಿಕರು ದಿನನಿತ್ಯದ ಜೀವನ ನಿರ್ವಹಣೆಗೆ ಸಾಲದ ಮೊರೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಸಂಕಷ್ಟವನ್ನು ತೋಡಿಕೊಂಡರು .

ರಾಜ್ಯ ಸರ್ಕಾರವು ಮೇ 22ರಂದು ಪರಿಷ್ಕೃತ ಕನಿಷ್ಠ ವೇತನ ಜಾರಿಗೊಳಿಸುವಂತೆ ಆದೇಶಿಸಿದ್ದರೂ, ಒಂದು ತಿಂಗಳ ವೇತನ ಪಾವತಿಸಿದ ಬಳಿಕ ಪರಿಷ್ಕೃತ ವೇತನವನ್ನು ತಡೆಹಿಡಿಯಲಾಗಿದೆ. ಪರಿಷ್ಕೃತ ಕನಿಷ್ಠ ವೇತನ ಜಾರಿಗೆ ಸಂಬಂಧಿಸಿದಂತೆ ನ್ಯಾಯಾಲಯದ ಆದೇಶದ ಹಿನ್ನೆಲೆಯಲ್ಲಿ ಕೂಡಲೇ ಪರಿಷ್ಕೃತ ವೇತನ ಪಾವತಿಸಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಪ್ರತಿಭಟನಾಕಾರರಿಂದ ಮನವಿ ಸ್ವೀಕರಿಸಿದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಂ.ಡಿ. ಹ್ಯಾರೀಸ್ ಸುಮೇರ್ ಅವರು, ಅಧಿಕಾರಿಗಳೊಂದಿಗೆ ಸಭೆ ನಡೆಸಿ ಸಮಸ್ಯೆ ಪರಿಹರಿಸಲು ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಂಖಗಖಿಗಅ ಜಿಲ್ಲಾ ಅಧ್ಯಕ್ಷ ಎ. ದೇವದಾಸ್, ಹಾಸ್ಟೆಲ್ ಕಾರ್ಮಿಕರ ಸಂಘದ ಜಿಲ್ಲಾ ಅಧ್ಯಕ್ಷ ಪ್ರಮೋದ್, ಜಿಲ್ಲಾ ಕಾರ್ಯದರ್ಶಿ ಸುರೇಶ್ ಜಿ., ಮುಖಂಡರಾದ ಮುರಳಿ ಕೃಷ್ಣ, ಲಕ್ಷ್ಮೀದೇವಿ, ಈಶ್ವರಮ್ಮ, ಚೇತನ್, ಸುರೇಶ್, ಸುಂದರ್, ಖಾಜಾಸಾಬ್, ರಾಮು, ಮಲ್ಲಮ್ಮ, ನಾಗೇಶಯ್ಯ ಸೇರಿದಂತೆ ನೂರಾರು ಕಾರ್ಮಿಕರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

# ಕೂಲಿ ಹಣ ವಿಳಂಬ: ಕಾರ್ಮಿಕರ ಆಕ್ರೋಶ



ಕೊಟ್ಟೂರ : ಉಜ್ಜಿನಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಿ.ಬಿ.ಜಿ. ರಾಮ್ ಜಿ ಯೋಜನೆಯಡಿ ವಿವಿಧ ಅಭಿವೃದ್ಧಿ ಕಾಮಗಾರಿಗಳಲ್ಲಿ ಕೆಲಸ ನಿರ್ವಹಿಸಿದ ಕೂಲಿ ಕಾರ್ಮಿಕರಿಗೆ ಕಳೆದ ಎರಡೂ ತಿಂಗಳುಗಳಿಂದ ಕೂಲಿ ಹಣ ಪಾವತಿಯಾಗದೆ ವಿಳಂಬವಾಗಿದ್ದು, ಕಾರ್ಮಿಕರು ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ.

ಗ್ರಾಮ ಪಂಚಾಯಿತಿ ವ್ಯಾಪ್ತಿಯ ವಿವಿಧ ಗ್ರಾಮಗಳಲ್ಲಿ ಯೋಜನೆಯಡಿ ಕೈಗೊಂಡ ಕಾಮಗಾರಿಗಳಲ್ಲಿ ಸ್ಥಳೀಯ ಕಾರ್ಮಿಕರು ಕೆಲಸ ನಿರ್ವಹಿಸಿದ್ದಾರೆ. ಆದರೆ ಕೆಲಸ ಪೂರ್ಣಗೊಳಿಸಿ ಹಲವು ದಿನಗಳು ಕಳೆದರೂ ಕೂಲಿ ಹಣ ಖಾತೆಗೆ ಜಮೆಯಾಗಿಲ್ಲ ಎಂದು ಕಾರ್ಮಿಕರು ಅಸಮಾಧಾನ ವ್ಯಕ್ತಪಡಿಸಿದರು

ದಿನಗೂಲಿ ಕೆಲಸವನ್ನೇ ಅವಲಂಬಿಸಿರುವ ಕುಟುಂಬಗಳಿಗೆ ಕೂಲಿ ಹಣ ವಿಳಂಬವಾಗಿರುವುದು ತೀವ್ರ ತೊಂದರೆ ಉಂಟುಮಾಡಿದೆ. ದಿನನಿತ್ಯದ ಜೀವನ ನಿರ್ವಹಣೆ, ಮಕ್ಕಳ ಶಿಕ್ಷಣ, ಮನೆ ಖರ್ಚು ಹಾಗೂ ಅಗತ್ಯ ವಸ್ತುಗಳ ಖರೀದಿಗೆ ಹಣದ ಕೊರತೆ ಎದುರಾಗಿದೆ ಎಂದು ಕಾರ್ಮಿಕರು ತಿಳಿಸಿದರು.

ಯೋಜನೆಯಡಿ ಕೆಲಸ ಮಾಡಿದ ನಂತರ ನಿಗದಿತ ಅವಧಿಯಲ್ಲಿ ಕೂಲಿ ಹಣ ಪಾವತಿಯಾಗಬೇಕು. ಆದರೆ ಹಣ ಪಾವತಿಗೆ ಸಂಬಂಧಿಸಿದಂತೆ ತಾಂತ್ರಿಕ ಹಾಗೂ ಆಡಳಿತಾತ್ಮಕ ಕಾರಣಗಳಿಂದ ವಿಳಂಬವಾಗುತ್ತಿದೆ ಆದ್ದರಿಂದ ಸಂಬಂಧಿಸಿದ ಅಧಿಕಾರಿಗಳು ಸಮಸ್ಯೆಯನ್ನು ಶೀಘ್ರವಾಗಿ ಪರಿಹರಿಸಬೇಕೆಂದು ಕಾರ್ಮಿಕರು ಒತ್ತಾಯಿಸಿದ್ದಾರೆ.

ನಾವು ಕೂಲಿ ಕೆಲಸ ಮಾಡಿ ಕುಟುಂಬ ನಿರ್ವಹಣೆ ಮಾಡುತ್ತಿದ್ದೇವೆ. ಕೆಲಸ ಮಾಡಿದ ಹಣ ಸಮಯಕ್ಕೆ ಸರಿಯಾಗಿ ದೊರೆಯದಿದ್ದರೆ ಜೀವನ ನಡೆಸುವುದು ಕಷ್ಟವಾಗುತ್ತದೆ. ಅಧಿಕಾರಿಗಳು ಕೂಡಲೇ ಕ್ರಮ ಕೈಗೊಂಡು ಬಾಕಿ ಇರುವ ಕೂಲಿ ಹಣವನ್ನು ಪಾವತಿಸಬೇಕು" ಎಂದು ಕಾರ್ಮಿಕರು ಆಗ್ರಹಿಸಿದರು

ಗ್ರಾಮ ಪಂಚಾಯಿತಿ ಅಧಿಕಾರಿಗಳು ಹಾಗೂ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಈ ಕುರಿತು ಪರಿಶೀಲನೆ ನಡೆಸಿ, ಬಾಕಿ ಇರುವ ಕೂಲಿ ಹಣದ ವಿವರ ಪಡೆದು ಅರ್ಹ ಕಾರ್ಮಿಕರ ಖಾತೆಗಳಿಗೆ ಶೀಘ್ರ ಹಣ ಜಮೆಯಾಗುವಂತೆ ಕ್ರಮ ಕೈಗೊಳ್ಳಬೇಕು. ಜೊತೆಗೆ ಮುಂದೆ ಇಂತಹ ವಿಳಂಬ ಮರುಕಳಿಸದಂತೆ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಸಾರ್ವಜನಿಕರು ಒತ್ತಾಯಿಸಿದರು.

# ರಸ್ತೆಯಲ್ಲಿ ತರಕಾರಿ ಸಂಚಾರಕ್ಕೆ ಕಿರಿಕಿರಿ



ಬಳ್ಳಾರಿ : ಅರಸೀಕೆರೆ ಗ್ರಾಮದಲ್ಲಿ ಪ್ರತಿ ಶುಕ್ರವಾರ ನಡೆಯುವ ಸಂತೆಗೆ ಗ್ರಾಮದ ಮುಖ್ಯ ರಸ್ತೆಯನ್ನೇ ಮಾರುಕಟ್ಟೆ ಮಾಡಿಕೊಂಡು ವ್ಯಾಪಾರ ಮಾಡಲಾಗುತ್ತಿದೆ. ಇದರಿಂದ ಸಾರ್ವಜನಿಕರು, ಶಾಲಾ-ಕಾಲೇಜು ವಿದ್ಯಾರ್ಥಿಗಳು ಹಾಗೂ ವಾಹನ ಸವಾರರಿಗೆ ತೊಂದರೆ ಉಂಟಾಗುತ್ತಿದೆ.

ವ್ಯಾಪಾರಕ್ಕಾಗಿ ಅಕ್ಕ-ಪಕ್ಕದ ಹತ್ತಾರು ಗ್ರಾಮಗಳ ಸಾವಿರಾರು ಜನರು ಸಂತೆಗೆ ಬರುತ್ತಾರೆ. ಸಂತೆ ನಡೆಯುವ ರಸ್ತೆಯೇ ಗ್ರಾಮದ ಪ್ರಮುಖ ರಸ್ತೆಯಾಗಿದ್ದರಿಂದ ಎಲ್ಲ ವಾಹನಗಳು ಇದೇ ಮಾರ್ಗವಾಗಿ ಸಂಚರಿಸಬೇಕು. ಆದರೆ, ರಸ್ತೆಯಲ್ಲಿ ತರಕಾರಿ ಅಂಗಡಿಗಳು, ಮಾರುಕಟ್ಟೆಗೆ ಬರುವ ಜನರ ಬೈಕ್‌ಗಳನ್ನು ನಿಲ್ಲಿಸುತ್ತಿದ್ದಾರೆ. ಇದರಿಂದ ಓಡಾಟಕ್ಕೆ ರಸ್ತೆಯೇ ಕಾಣದಂತ್ತಾಗಿದೆ. ವ್ಯಾಪಾರ ಮಾಡಿ ಸಂತೆ ಮುಗಿದ ನಂತರ ತ್ಯಾಜ್ಯವನ್ನು ರಸ್ತೆಯಲ್ಲಿಯೇ ಬಿಡಲಾಗುತ್ತಿದೆ. ಮಾರುಕಟ್ಟೆ ನಡೆಯುವ ಸ್ಥಳದ ಎದುರು ಕೋಲಶಾಂತೇಶ್ವರ ಮಠದ ಶಾಲಾ-ಕಾಲೇಜು, ಕೃಷಿ ಕಚೇರಿ, ಗ್ರಂಥಾಲಯ, ಅಂಗನವಾಡಿ, ಪಶು ಆಸ್ಪತ್ರೆ, ಹಾಲಿನ ಡೈರಿಗಳು ಅಕ್ಕಪಕ್ಕದಲ್ಲಿರುವುದರಿಂದ ಗ್ರಾಮಸ್ಥರಿಗೆ ಕಚೇರಿ ಸಿಬ್ಬಂದಿಗೆ ಸಮಸ್ಯೆಯಾಗುತ್ತಿದೆ.

ಅರಸೀಕೆರೆ ರಸ್ತೆ ವಿಸ್ತರಣೆ ನಡೆದರೂ ಸುಗಮ ಸಂಚಾರ ಸಾಧ್ಯವಾಗುತ್ತಿಲ್ಲ. ಮಾರುಕಟ್ಟೆಗೆ ಸೂಕ್ತ ಸ್ಥಳವಿಲ್ಲ. ರಸ್ತೆಯಲ್ಲಿ ವ್ಯಾಪಾರ ಮಾಡುವ ಮಾರಾಟಗಾರರಿಂದ ನಿಗದಿಗಿಂತಲೂ ಹೆಚ್ಚು ಹಣ ಪಡೆಯುತ್ತಾ-ರೆ ಎಂಬ ದೂರುಗಳಿವೆ. ಗ್ರಾಪಂ ಕರ ವಸೂಲಾತಿ ಮಾಡುವುದು ಬಿಟ್ಟರೆ, ಸಂತೆಯಲ್ಲಿ ಮಾರಾಟಗಾರರಿಗೆ ಹಾಗೂ ವ್ಯಾಪಾರಿಗಳಿಗೆ ಯಾವುದೇ ಸೌಕರ್ಯ ನೀಡುತ್ತಿಲ್ಲ ಎಂದು ನಿವಾಸಿಗಳು ಆಕ್ರೋಶ ವ್ಯಕ್ತಪಡಿಸುತ್ತಾರೆ.

# ತಂದೆ ಕೊಟ್ಟ ಭೂಮಿಯನ್ನು ಸಸ್ಯಶಾಸ್ತ್ರೀಯ ಉದ್ಯಾನವನಕ್ಕೆ ಭೂದಾನ ಮಾಡಿದ ಕೂಡ್ಲಿಗಿ ಶಾಸಕ



ಕೂಡ್ಲಿಗಿ. ಸೆ. 22 :- ಮಗನ ಭವಿಷ್ಯಕ್ಕಾಗಿ ತಂದೆ ಭೂದಾನ ಮಾಡಿ ಕೊಟ್ಟರೆ ಅದರಲ್ಲಿ 2 ಎಕರೆ ಭೂಮಿಯನ್ನು ಪರಿಸರದ ದೃಷ್ಟಿ ಇಟ್ಟುಕೊಂಡ ಮಗ ಸಸ್ಯಶಾಸ್ತ್ರೀಯ ಉದ್ಯಾನವನ ನಿರ್ಮಾಣಕ್ಕೆ ಭೂದಾನ ಮಾಡಿಕೊಟ್ಟ ಅಪರೂಪದ ಪ್ರಸಂಗ ಕೂಡ್ಲಿಗಿಯಲ್ಲಿ ಕಂಡು ಬಂದಿದೆ.

ಹೌದು, ಈ ರೀತಿಯ ಅಪರೂಪದ ಸನ್ನಿವೇಶಕ್ಕೆ ಸಾಕ್ಷಿಯಾದವರು ಬೇರಾರು ಅಲ್ಲ ಕೂಡ್ಲಿಗಿ ಕ್ಷೇತ್ರದ ಹಾಲಿ ಶಾಸಕ ಡಾ ಶ್ರೀನಿವಾಸ ಎನ್ ಟಿ ಯಾಗಿದ್ದಾರೆ. ಇವರ ತಂದೆ ಮಾಜಿ ಶಾಸಕ ಎನ್ ಟಿ ಬೊಮ್ಮಣ್ಣ ಮೂಲೆ ಕಟ್ಟಿನ ಗ್ರಾಮಗಳಲ್ಲಿ ಪ್ರೌಢಶಾಲೆಗಳನ್ನು ತೆರೆದು ಮಕ್ಕಳು ಶಿಕ್ಷಣದಿಂದ ವಂಚಿತರಾಗದಂತೆ ಕಾಳಜಿವಹಿಸಿದ್ದ ಶಿಕ್ಷಣ ಪ್ರೇಮಿ ಅವರು ಈ ಹಿಂದೆ ತನ್ನ ಕೊನೆ ಮಗನಿಗೆ ಭವಿಷ್ಯದ ದೃಷ್ಟಿಯಲ್ಲಿ ಇರಲಿ ಎಂದು ಕೂಡ್ಲಿಗಿ ತಾಲೂಕಿನ ಗುಡೇ-ಕೋಟೆ ಹೋಬಳಿಯ ಬೆಳ್ಳಗಟ್ಟ ಕಂದಾಯ ಗ್ರಾಮದ ಸರ್ವೇ ನಂಬರ್ 266/2 ರ 9 ಎಕರೆ ಭೂಮಿಯನ್ನು ದಾನವಾಗಿ ಮಾಡಿಕೊಟ್ಟಿದ್ದರು ತಂದೆ ಶಿಕ್ಷಣ ಪ್ರೇಮಿಯಾದರೆ ಮಗ ಹಾಲಿ ಕೂಡ್ಲಿಗಿ ಶಾಸಕ ಗುಣಸಾಗರದಲ್ಲಿ ಸರ್ಕಾರಿ ಶಾಲೆಗೆ ಸ್ವಂತ ಖರ್ಚಿನಲ್ಲಿ ಖರೀದಿಸಿದ ಭೂಮಿ ದಾನ ಮಾಡಿ ಶಿಕ್ಷಣ ಪ್ರೇಮಿಯಾಗುವ ಜೊತೆಗೆ ತಂದೆ ಕೊಟ್ಟ ಭೂಮಿಯಲ್ಲಿನ ಎರಡು ಎಕರೆ ಭೂಮಿಯನ್ನು ಸಸ್ಯಶಾಸ್ತ್ರೀಯ ಉದ್ಯಾನವನ ನಿರ್ಮಾಣಕ್ಕೆ ರಾಜ್ಯದ ರಾಜ್ಯಪಾಲರ ಪರವಾಗಿ ತೋಟಗಾರಿಕೆ ಇಲಾಖೆಗೆ ಯಾವುದೇ ಫಾಲಾಪೇಕ್ಷೆ ಬಯಸದೆ ಉಚಿತವಾಗಿ ದಾನ ಮಾಡಿ 2026 ಸೆಪ್ಟೆಂಬರ್ 18ರಂದು ಕೂಡ್ಲಿಗಿ ಉಪನೋಂದಣಿ ಕಚೇರಿಯಲ್ಲಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಜಿ ಪಂ ಇವರಿಗೆ ದಾನ ಮಾಡಿ ಪರಿಸರ ಪ್ರೇಮಿ ಶಾಸಕರಾಗುವ ಜೊತೆಗೆ ಈ ರೀತಿಯ ಸಾಮಾಜಿಕ ಕಳಕಳಿ ಇಟ್ಟುಕೊಂಡ ಇತಿಹಾಸದ ಮೊದಲ ಶಾಸಕರೆಂದರೆ ತಪ್ಪಾಗದು.

ಶಾಸಕ ಡಾ ಶ್ರೀನಿವಾಸ ಭೂದಾನ ಮಾಡಿದ ಎರಡು ಎಕರೆ ಭೂಮಿ ಬರೀ ಭೂಮಿಯಲ್ಲ ಭವಿಷ್ಯದ ಉಸಿರಿಗೆ ನೀಡಿದ ಜಾಗ,ಮನುಷ್ಯನಿಗೆ ಉಸಿರು ಎಷ್ಟು ಮುಖ್ಯವೋ, ಭೂಮಿಗೆ ಹಸಿರು ಅಷ್ಟೇ ಮುಖ್ಯ. ಹಸಿರು ಉಳಿದರೆ ಮಾತ್ರ ಮನುಕುಲ ಉಳಿಯುತ್ತದೆ ಎಂಬ ಸತ್ಯವನ್ನು ಅರಿತು, ಪರಿಸರ ಸಂರಕ್ಷಣೆಯ ಬಗ್ಗೆ ಕೇವಲ ಮಾತಿನಲ್ಲಿ ಹೇಳದೆ ತಮ್ಮ ಕಾರ್ಯದ ಮೂಲಕ ಕೂಡ್ಲಿಗಿ ಕ್ಷೇತ್ರದ ಶಾಸಕ ಡಾ. ಶ್ರೀನಿವಾಸ ಎನ್ ಟಿ ಮಾದರಿಯಾಗಿದ್ದಾರೆ.ರಕ್ತದಾನ ಒಂದು ಜೀವ ಉಳಿಸುತ್ತದೆ,ಅನ್ನದಾನ ಒಂದು ಹಸಿವು ನೀಗಿಸುತ್ತದೆ

ಆದರೆ ಹಸಿರಿನ ದಾನ ಅಸಂಖ್ಯಾತ ಜೀವಿಗಳಿಗೆ ಉಸಿರು ನೀಡುತ್ತದೆ.ಈ ಎರಡು ಎಕರೆ ಭೂಮಿಯಲ್ಲಿ ಬೆಳೆಯುವ ಪ್ರತಿಯೊಂದು ಸಸಿಗಳು ಮುಂದಿನ ದಿನಗಳಲ್ಲಿ ಹೆಮ್ಮರವಾಗಿ ಬೆಳೆಯಲಿವೆ . ಆ ಮರಗಳು ಪಕ್ಷಿ ಸಂಕುಲಗಳಿಗೆ ಆಶ್ರಯ, ಜೀವ ವೈವಿಧ್ಯತೆಗೆ ನೆಲೆ, ಶುದ್ಧ ಆಮ್ಲಜನಕಕ್ಕೆ ಆಧಾರವಾಗಲಿವೆ. ಹಸಿರು ಪ್ರದೇಶ ವಿಸ್ತಾರಗೊಳ್ಳುವುದರಿಂದ ಮಳೆನೀರು ಭೂಮಿಗೆ ಇಂಗಿ ಅಂತರ್ಜಲ ಸಂರಕ್ಷಣೆಗೆ ಸಹಕಾರಿಯಾಗಲಿದೆ. ಪರಿಸರ ಮಾಲಿನ್ಯ ಕಡಿಮೆಯಾಗಲು, ಸ್ಥಳೀಯ ವಾತಾವರಣದ ಸಮತೋಲನ ಕಾಪಾಡಲು ಹಾಗೂ ಆರೋಗ್ಯಕರ ಹಸಿರು ಪರಿಸರ ನಿರ್ಮಾಣಕ್ಕೂ ಪೂರಕವಾಗಲಿದೆ.

ನಾಳೆ ಈ ಜಾಗ ಮಕ್ಕಳಿಗೆ ಪ್ರಕೃತಿಯ ಪಾಠಶಾಲೆಯಾಗಬಹುದು; ಪಕ್ಷಿಗಳಿಗೆ ಆಶ್ರಯವಾಗಬಹುದು; ಸಸ್ಯಗಳಿಗೆ ನೆಲೆಯಾಗಬಹುದು; ಜನರಿಗೆ ನೆಮ್ಮದಿಯ ಹಸಿರು ತಾಣವಾಗಬಹುದು.

ತಂದೆ ಭವಿಷ್ಯಕ್ಕಾಗಿ ನೀಡಿದ ಭೂಮಿಯನ್ನು ಮಗ ಮೋಜು ಮಸ್ತಿಗೆ ಹಾಳುಮಾಡದೇ ಸಮಾಜದ ಒಳತಿಗೆ ಬಳಕೆಯಾಗಲಿ ಎಂದು ಅರಿತು ಭೂ ದಾನ ಮಾಡುವ ಮೂಲಕ ತಂದೆಗೆ ತಕ್ಕ ಮಗನಾಗಿ ಅಪ್ಪ ಶಿಕ್ಷಣ ಪ್ರೇಮಿಯಾದರೆ ಮಗ ತನೊಬ್ಬ ವೈದ್ಯನಾಗಿ ಪರಿಸರ ಕಾಪಾಡುವ ಹಸಿರು ವನ ನಿರ್ಮಾಣ ಮಾಡಲು ಆರೋಗ್ಯಕರ ಸಮಾಜ ನಿರ್ಮಾಣದ ಪರಿಸರ ಪ್ರೇಮಿಯಾಗುವ ಭವಿಷ್ಯವಾಣಿಗೆ ಕೂಡ್ಲಿಗಿ ಶಾಸಕ ಡಾ ಶ್ರೀನಿವಾಸ ರಾಜ್ಯದಲ್ಲಿಯೇ ಮಾದರಿ ಶಾಸಕರೆಂದು ಹೇಳಬಹುದು.

# ಸ್ಥಳೀಯ ಯುವಕರಿಗೆ ಉದ್ಯೋಗ, ಕೌಶಲ್ಯ ತರಬೇತಿಗೆ ಆಗ್ರಹಿಸಿ ಕರವೇ ಮನವಿ



ಸಂಡೂರು/ಬಳ್ಳಾರಿ: ಪಟ್ಟಣದ ಸಾರ್ವಜನಿಕ ಹಿತಾಸಕ್ತಿ ಹಾಗೂ ಸ್ಥಳೀಯ ಸಮಸ್ಯೆಗಳ ಕುರಿತು ಕರ್ನಾಟಕ ರಕ್ಷಣಾ ವೇದಿಕೆ (ರಿ.) ಕುರೇಕುಪ್ಪ ಘಟಕದ ನಿಯೋಗವು ಮಂಗಳವಾರ ಎಖಫ ಅಧಿಕಾರಿಗಳನ್ನು ಭೇಟಿ ಮಾಡಿ ವಿವಿಧ ಬೇಡಿಕೆಗಳ ಕುರಿತು ಮನವಿ ಸಲ್ಲಿಸಿತು.

ನಿಯೋಗವು ಸ್ಥಳೀಯ ಅರ್ಹ ಯುವಕರಿಗೆ ಹೆಚ್ಚಿನ ಉದ್ಯೋಗಾವಕಾಶ ಕಲ್ಪಿಸುವುದು, ಕೌಶಲ್ಯಾಭಿವೃದ್ಧಿ ಮತ್ತು ಉದ್ಯೋಗ ಆಧಾರಿತ ತರಬೇತಿ ನೀಡುವುದು, ತರಬೇತಿ ಪಡೆಯುವವರಿಗೆ ಉಚಿತ ಸಾರಿಗೆ ವ್ಯವಸ್ಥೆ ಕಲ್ಪಿಸುವಂತೆ ಒತ್ತಾಯಿಸಿತು.

ಒಂದೇ ಕೆಲಸ ಮತ್ತು ಒಂದೇ ಸ್ಥಳದಲ್ಲಿ ಕಾರ್ಯನಿರ್ವಹಿಸುವ ಸ್ಥಳೀಯ ಹಾಗೂ ಹೊರಗಿನ ಕಾರ್ಮಿಕರ ನಡುವೆ ವೇತನ ವ್ಯತ್ಯಾಸವಿದ್ದರೆ ಪರಿಶೀಲಿಸಿ ಸಮಾನ ವೇತನ ವ್ಯವಸ್ಥೆ ಜಾರಿಗೊಳಿಸಬೇಕು ಎಂದು ಮನವಿಯಲ್ಲಿ ತಿಳಿಸಲಾಯಿತು. ಜೊತೆಗೆ ಪರಿಸರ ಮಾಲಿನ್ಯ ನಿಯಂತ್ರಣಕ್ಕೂ ಹೆಚ್ಚಿನ ಆದ್ಯತೆ ನೀಡುವಂತೆ ಅಧಿಕಾರಿಗಳ ಗಮನ ಸೆಳೆಯಲಾಯಿತು.

# ಕಳಪೆ ಕುಂಬಳ ಬೀಜ ರೈತರಿಗೆ ಲಕ್ಷಾಂತರ ರೂಪಾಯಿ ನಷ್ಟ: ಸ್ಪಂದಿಸದ ವ್ಯಾಪಾರಿ ವಿರುದ್ಧ ರೈತರ ಆಕ್ರೋಶ



ಕೊಟ್ಟೂರು : ಕೊಟ್ಟೂರು ತಾಲೂಕಿನ ಹ್ಯಾಳ್ಯಾ ಗ್ರಾಮದ ರೈತರಾದ ಹಾಲೇಶ ಮತ್ತು ಕೊಟ್ರೇಶ ಎಫ್ 1 ರಾಮ್ ಕುಂಬಳ ಬೀಜ ಬಿತ್ತಿ ಫಲ ಕೊಡದೆ ತೀವ್ರ ನಷ್ಟಕ್ಕೆ ಒಳಗಾಗಿದ್ದಾರೆ ಒಂದೆಡೆ ಮಳೆ ಬಾರದೆ ಕಂಗಾಲಾಗಿದ್ದು ಮತ್ತೊಂದಡೆ ಕಳಪೆ ಬೀಜದಿಂದ ಸಂಕಷ್ಟಕ್ಕೆ ಗುರಿಯಾಗಿದ್ದಾರೆ ಅಧಿಕ ಇಳುವರಿ ಹೆಚ್ಚು ಲಾಭದ ನಿರೀಕ್ಷೆಯಿಂದ ದಾವಣಗೆರೆಯ ಬ್ರಹ್ಮಲಿಂಗೇಶ್ವರ ಆಗ್ರೋ ಫರ್ಟಿಲೈಜರ್ಸನಲ್ಲಿ ಹ್ಯಾಳ್ಯಾದ ರೈತರಾದ ಹಾಲೇಶ ಮತ್ತು ಕೊಟ್ರೇಶ 18600 ರೂ. ಕೊಟ್ಟು ಎಫ್ 1 ರಾಮ್ ಕುಂಬಳ ಬೀಜವನ್ನು ತಂದು ನೀರಾವರಿಗೆ ಬಿತ್ತನೆ ಮಾಡಿದ್ದಾರೆ.ಈ ಎಫ್1 ರಾಮ್ ಕುಂಬಳ ಬೀಜವನ್ನು ಹಾಲೇಶ ಮೂರು ಎಕರೆಗೆ ಬಿತ್ತನೆ ಮಾಡಿದ್ದು ಕೊಟ್ರೇಶ್ ಒಂದು ಎಕರೆಯಲ್ಲಿ ಬಿತ್ತನೆ ಮಾಡಿದ್ದಾರೆ ನೀರಾವರಿ ಫಲವತ್ತಾದ ಭೂಮಿ ಉತ್ತಮ ಇಳುವರಿಯ ನಿರೀಕ್ಷೆ ಮಾಡಿಕೊಂಡಿದ್ದ ಈ ಇಬ್ಬರು ರೈತರು ಆಘಾತಕ್ಕೆ ಒಳಗಾಗಿದ್ದಾರೆ

ಆರಂಭದಲ್ಲಿ ಕುಂಬಳ ಬೆಳೆ ಚನ್ನಾಗಿ ಬೆಳೆಯಿತು ಇನ್ನೇನು ಕಾಯಿ ಕಟ್ಟುತ್ತದೆ ಎಂದು ಆಸೆಯಿಂದ ಕಾದಿದ್ದ ರೈತರಿಗೆ ಮೂರು ತಿಂಗಳಾದರೂ ಒಂದೇ ಒಂದು ಕಾಯಿ ಕಟ್ಟದಿದ್ದರಿಂದ ದೊಡ್ಡ ನಿರಾಶೆ ಉಂಟಾಗಿದೆ

ಈ ರೈತರು ಹೊಲಕ್ಕೆ ಬಂದು ಕಾಯಿ ಬಿಡದ ಕುಂಬಳ ನೋಡಿ ತಲೆ ಮೇಲೆ ಕೈಹೊತ್ತುಕೊಂಡು ಕುಳಿತರು ಕುಂಬಳ ಬೀಜ ಕಳಪೆ ಎಂಬುದರಲ್ಲಿ ಎರಡು ಮಾತಿರಲಿಲ್ಲ ಇತರೆ ರೈತರು ಇದನ್ನೇ ಹೇಳಿದರು ಎಕರೆಗೆ 30000 ರೂಗಳಂತೆ ಮೂರು ಎಕರೆಗೆ 1 ಲಕ್ಷ ರೂ ಖರ್ಚಾಗಿದೆ ಕುಂಬಳ ಬೆಳೆಗೆ ಪಂಪ್ ಸೆಟ್ ನಿಂದ ಸರಿಯಾಗಿ ನೀರು ಹಾಯಿಸಲಾಗಿದೆ ಮೂರು ತಿಂಗಳಾದರೂ ಕಾಯಿ ಬಿಟ್ಟಿಲ್ಲ ಹಾಕಿದ ಬಂಡವಾಳವೂ ಇಲ್ಲ ಬೆಳೆಯು ಇಲ್ಲದೆ ರೈತರಿಗೆ ಚಿಂತೆ ಆವರಿಸಿದೆ ಅನಿವಾರ್ಯವಾಗಿ ಮೂರು ತಿಂಗಳಾದರೂ ಕಾಯಿ ಬಿಡದ ಕುಂಬಳ ಬೆಳೆಯನ್ನು

ರೂಟರ್ ಹೊಡೆಸಲಾಗಿದೆ ಕಳಪೆ ಕುಂಬಳ ಬೀಜ ಖರೀದಿಸಿದ ಅಂಗಡಿಯವರಿಗೆ ಫೋನ್ ಮಾಡಿದರೆ ಸರಿಯಾಗಿ ಸ್ಪಂದಿಸುತ್ತಿಲ್ಲ ರೈತರು ಅನುಭವಿಸಿದ ನಷ್ಟವನ್ನು ಯಾರು ಕೊಡುತ್ತಾರೆ

ಕಳಪೆ ಬೀಜ ಮಾರಾಟ ಮಾಡುವ ಅಂಗಡಿ ಮತ್ತು ಕಂಪನಿ ವಿರುದ್ಧ ಕೃಷಿ ಅಧಿಕಾರಿಗಳು ಸ್ಥಳಕ್ಕೆ ಭೇಟಿ ಸೂಕ್ತ ಕ್ರಮ ಕೈಗೊಳ್ಳಬೇಕಿದೆ ಎಂದು ಹಾಲೇಶ ಮತ್ತು ಕೊಟ್ರೇಶ ಆಗ್ರಹಿಸಿದ್ದಾರೆ.

# ಹೆಚ್ಚುವರಿ ಕೆಲಸದಿಂದ ಮುಕ್ತಿ ನೀಡಿ, ಅಂಗನವಾಡಿ ನೌಕರರನ್ನು ಖಾಯಂಗೊಳಿಸಿ: ವರಲಕ್ಷ್ಮೀ ಆಗ್ರಹ




ಬಳ್ಳಾರಿ/ಕಂಪ್ಲಿ: ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರಿಗೆ ಅನಗತ್ಯ ಹೆಚ್ಚುವರಿ ಕೆಲಸಗಳನ್ನು ನೀಡುವ ಮೂಲಕ ಅಂಗನವಾಡಿ ಕೇಂದ್ರಗಳ ಗುಣಮಟ್ಟವನ್ನು ಕುಗ್ಗಿಸುತ್ತಿವೆ. ಹೆಚ್ಚುವರಿ ಕೆಲಸದಿಂದ ಮುಕ್ತಿ ನೀಡಿ, ಅಂಗನವಾಡಿ ಕೇಂದ್ರಗಳಲ್ಲಿಯೇ ಸೇವೆ ಸಲ್ಲಿಸಲು ಅವಕಾಶ ಕಲ್ಪಿಸಬೇಕು ಹಾಗೂ ಬಹುಕಾಲದಿಂದ ಬಾಕಿ ಇರುವ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘ (ಸಿಐಟಿಯು) ರಾಜ್ಯಾಧ್ಯಕ್ಷೆ ಎಸ್. ವರಲಕ್ಷ್ಮೀ ಆಗ್ರಹಿಸಿದರು.

ಪಟ್ಟಣದ ಶಿಬಿರದಿನ್ನಿ (ಮಾರುತಿ ನಗರ) ಪುರಸಭೆ ಸಮುದಾಯ ಭವನದಲ್ಲಿ ಸೋಮವಾರ ನಡೆದ ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘ (ಸಿಐಟಿಯು) ಬಳ್ಳಾರಿ ಜಿಲ್ಲಾ 10ನೇ ಜಿಲ್ಲಾ ಸಮ್ಮೇಳನವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಹಲವು ವರ್ಷಗಳಿಂದ ಮಕ್ಕಳ ಪೌಷ್ಟಿಕತೆ, ಶಿಕ್ಷಣ ಮತ್ತು ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿರುವ ಅಂಗನವಾಡಿ ನೌಕರರನ್ನು ಖಾಯಂಗೊಳಿಸಿ, ಕನಿಷ್ಠ ವೇತನದ ವ್ಯಾಪ್ತಿಗೆ ತರಬೇಕು. ಅಂಗನವಾಡಿ ಕೇಂದ್ರಗಳಲ್ಲಿ ಎಲ್‌ಕೆಜಿ ಹಾಗೂ ಯುಕೆಜಿ ಆರಂಭಿಸಬೇಕು. ಮಕ್ಕಳಿಗೆ ನೀಡುವ ಪೌಷ್ಠಿಕ ಆಹಾರ ಮತ್ತು ಅನುದಾನವನ್ನು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಸಮರ್ಪಕವಾಗಿ ಒದಗಿಸುತ್ತಿಲ್ಲ ಎಂದು ಅವರು ಆರೋಪಿಸಿದರು.

ಅಂಗನವಾಡಿ ಕೇಂದ್ರಗಳ ಮೂಲಭೂತ ಸಮಸ್ಯೆಗಳ ಕುರಿತು ಸಮ್ಮೇಳನದಲ್ಲಿ ಚರ್ಚೆ ನಡೆಸಲಾಗಿದ್ದು, ನೌಕರರ ಬೇಡಿಕೆಗಳ ಈಡೇರಿ-ಕೆಗೆ ಮುಂದಿನ ಹೋರಾಟದ ರೂಪುರೇಷೆಗಳನ್ನು ಸಿದ್ಧಪಡಿಸಲಾಯಿತು. ಇದೇ ಹಿನ್ನೆಲೆಯಲ್ಲಿ ಡಿಸೆಂಬರ್ 1ರಂದು ದೆಹಲಿಯಲ್ಲಿ ನಡೆಯಲಿರುವ 'ದೆಹಲಿ ಚಲೋ' ಬೃಹತ್ ಪ್ರತಿಭಟನೆಯಲ್ಲಿ ರಾಜ್ಯದ ಅಂಗನವಾಡಿ ನೌಕರರು ಭಾಗವಹಿಸಲಿದ್ದಾರೆ ಎಂದು ವರಲಕ್ಷ್ಮೀ ತಿಳಿಸಿದರು.

# ಬರ ಸಂಕಷ್ಟ: ವಿಶೇಷ ಅಧಿವೇಶನ ಅರ್ಥಹೀನ-ರೈತ ಸಂಘ



ಸಂಡೂರು/ಬಳ್ಳಾರಿ: ರಾಜ್ಯದಲ್ಲಿ ತಲೆದೋರಿರುವ ಭೀಕರ ಬರ ಪರಿಸ್ಥಿತಿ ಕುರಿತು ಚರ್ಚಿಸಲು ವಿಶೇಷ ಅಧಿವೇಶನ ಕರೆದಿರುವುದು ಸ್ವಾಗತಾರ್ಹ. ಆದ-ರೆ ರೈತರ ಸಂಕಷ್ಟಕ್ಕೆ ಸ್ಪಂದಿಸುವ ಪರಿಣಾಮಕಾರಿ ಯೋಜನೆಗಳನ್ನು ಜಾರಿಗೊಳಿಸದಿದ್ದರೆ ವಿಶೇಷ ಅಧಿವೇಶನ ಅರ್ಥಹೀನವಾಗಲಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ತಿಳಿಸಿದೆ. ನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಂಘದ ಮುಖಂಡರು, ಕಳೆದ 140 ವರ್ಷಗಳಲ್ಲೇ ರಾಜ್ಯದಲ್ಲಿ ತೀವ್ರ ಬರಗಾಲ ಎದುರಾಗಿದೆ ಎಂದು ಸರ್ಕಾರವೇ ಒಪ್ಪಿಕೊಂಡಿದೆ. ಕೆರೆ-ಕಟ್ಟೆಗಳು ಸೇರಿದಂತೆ ಜಲಮೂಲಗಳು ಬತ್ತಿದ್ದು, ರೈತರು ಬೆಳೆದ ಬೆಳೆಗಳು ಒಣಗಿ ಸಂಪೂರ್ಣ ನಷ್ಟವಾಗಿವೆ. ಅಂತರ್ಜಲ ಮಟ್ಟ ಕುಸಿದಿರುವುದರಿಂದ ತೋಟಗಾರಿಕಾ ಬೆಳೆಗಳೂ ಹಾನಿಗೀಡಾಗಿದ್ದು, ಜಾನುವಾರುಗಳಿಗೆ ಮೇವು ಮತ್ತು ಕುಡಿಯುವ ನೀರಿನ ಕೊರತೆ ಎದುರಾಗಿದೆ. ಪರಿಣಾಮವಾಗಿ ಗ್ರಾಮೀಣ ಜನರು ಜೀವನೋಪಾಯಕ್ಕಾಗಿ ವಲಸೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಹೇಳಿದರು. ಇಂತಹ ಗಂಭೀರ ಪರಿಸ್ಥಿತಿಯಲ್ಲೂ ರಾಜ್ಯ ಸರ್ಕಾರ ಕೇವಲ 101 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಿದ್ದು, ಇನ್ನಷ್ಟು ತಾಲೂಕುಗಳನ್ನು ಪಟ್ಟಿಗೆ ಸೇರಿಸುವ ವಿಚಾರದಲ್ಲಿ ವಿಳಂಬ ಮಾಡುತ್ತಿದೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಬರ ಪರಿಸ್ಥಿತಿಗೆ ಸಮರ್ಪಕವಾಗಿ ಸ್ಪಂದಿಸದೆ ನಿರ್ಲಕ್ಷ್ಯ ವಹಿಸುತ್ತಿವೆ ಎಂದು ಸಂಘ ಆರೋಪಿಸಿತು. ರಾಜ್ಯ ಸರ್ಕಾರ ಹಳೆಯ ಮಾನದಂಡಗಳ ನೆಪ ಹೇಳದೆ ತನ್ನ ಸಂಪನ್ಮೂಲಗಳನ್ನು ಬಳಸಿಕೊಂಡು ತುರ್ತು ಪರಿಹಾರ ಕ್ರಮಗಳನ್ನು ಕೈಗೊಳ್ಳಬೇಕು. ರೈತರ ಕೃಷಿ ಸಾಲ ಮನ್ನಾ, ಬ್ಯಾಂಕ್‌ಗಳ ಸಾಲ ವಸೂಲಾತಿಗೆ ತಡೆ, ಕೃಷಿ ಪಂಪ್‌ಸೆಟ್‌ಗಳಿಗೆ ಕನಿಷ್ಠ ಏಳು ಗಂಟೆಗಳ ವಿದ್ಯುತ್ ಪೂ-ರೈಕೆ, ಕೆರೆ-ಕಟ್ಟೆಗಳಿಗೆ ನೀರು ತುಂಬಿಸುವುದು, ಬೆಳೆ ನಷ್ಟಕ್ಕೆ ವೈಜ್ಞಾನಿಕ ಪರಿಹಾರ, ವಿಮಾ ಪರಿಹಾರವನ್ನು ರೈತರ ಖಾತೆಗೆ ಜಮಾ ಮಾಡುವುದು ಸೇರಿದಂತೆ ಹಲವು ಕ್ರಮಗಳನ್ನು ತಕ್ಷಣ ಜಾರಿಗೊಳಿಸಬೇಕು ಎಂದು ಆಗ್ರಹಿಸಲಾಯಿತು.

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.